ಸಂಪುಟ : 10 ಸಂಚಿಕೆ: 111 ಪುಟ : 4+2 ಬೆಲೆ: 3.00 ಮಂಗಳವಾರ ಜೂನ್ 03 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 111 Pages : 4+2 Price : 3.00 Tuesday June 03 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಪತ್ರಿಕಾಗೋಷ್ಠಿಯಲ್ಲಿ ಲಕ್ಕುಂಡಿ ಉತ್ಖನನ ಕಾರ್ಯಕ್ರಮದ ವಿವರ ನೀಡಿದ ಸಚಿವ ಎಚ್.ಕೆ. ಪಾಟೀಲ

# ಲಕ್ಕುಂಡಿ ಉತ್ಖನನ ಕಾರ್ಯ ಮಹತ್ವದ್ದು

■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಗೆ ಜೂನ್ 3ರಂದು ಮುಖ್ಯಂತ್ರಿಗಳು ಆಗಮಿಸಿ ಲಕ್ಕುಂಡಿಯ ಐತಿಹಾಸಿಕ ಸ್ಥಳದಲ್ಲಿ ನಮ್ಮ ಪರಂಪರೆಯನ್ನು ಪೂರ್ಣ ಪ್ರಮಾಣದಲ್ಲಿ ತಿಳಿಸುವ, ಯುನೆಸ್ಕೋ ಜಾಗತಿಕ ಪ್ರವಾಸಿ ತಾಣ ಆಗುವ ಎಲ್ಲ ಅರ್ಹತೆ, ಆಕರ್ಷಣೆ ಹೊಂದಿರುವ ಲಕ್ಕುಂಡಿಯಲ್ಲಿ ಉತ್ಖನನ ಕಾರ್ಯಕ್ಕೆ ಚಾಲನೆ ನೀಡುವರು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಉಪವಿಭಾಗಾಧಿಕಾರಿಗಳ ಕಟ್ಟಡದಲ್ಲಿರುವ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಚೇರಿಯಲ್ಲಿ ಜರುಗಿದ ಪತ್ರಿಕಾ ಗೋಷ್ಠಿಯಲ್ಲಿ ಸಚಿವರು ಮಾತನಾಡುತ್ತಿದ್ದರು.

ಸಿಎಂ ಸಿದ್ದರಾಮಯ್ಯ ಅವರು ನಂತರ ಲಕ್ಕುಂಡಿಯ ಬಯಲು ಪ್ರಾಚ್ಯಾವಶೇಷಗಳ ವಸ್ತು ಸಂಗ್ರಾಹಲಯದ ವೀಕ್ಷಣೆ ಮಾಡಿ ಕಾಶಿ ವಿಶ್ವನಾಥ ದೇಸವಸ್ಥಾನಕ್ಕೆ ಭೇಟಿ ನೀಡುವರು. ಅಲ್ಲಿಂದ ಗದಗ ನಗರಕ್ಕೆ ಆಗಮಿಸುವರು. ಮಧ್ಯಾಹ್ನ 12.50 ಗಂಟೆಗೆ ಗದಗ ನಗರದ ಶ್ರೀ ಸ್ವಾಮಿ ವಿವೇಕಾನಂದ ಭವನದಲ್ಲಿ ಕರ್ನಾಟಕ ಕುರುಬರ ಸಂಘ ಮತ್ತು ಕರ್ನಾಟಕ ಕುರಬರ ಸಹಕಾರಿ ಪತ್ತಿನ ಸಂಘದ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದರು.

ಮಧ್ಯಾಹ್ನ 3.30 ಗಂಟೆಗೆ ಗದಗ ಕೋ-ಆಪರೇಟೀವ್ ಇಂಡಸ್ಟ್ರಿಯಲ್ ಎಸ್ಟೇಟ್ ಆವರಣಕ್ಕೆ ಆಗಮಿಸಿ ಜಿ.ಎನ್.ಟಿ.ಟಿ.ಎಫ್ ಸಂಸ್ಥೆಯನ್ನು ಉದ್ಘಾಟಿಸುವರು. ಸಾಯಂಕಾಲ 4.30 ಗಂಟೆಗೆ ಜಿಲ್ಲಾ ರಂಗಮಂದಿರದಲ್ಲಿ ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರದ ಉದ್ಘಾಟನೆ ಹಾಗೂ 34 ಎಕರೆ ಪ್ರದೇಶದ ಪ್ರಾಧಿಕಾರದ ಪರಿಕಲ್ಪನೆ ಅನಾವರಣ ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.



> ನ್ಯಾಯ ವಿಧಾನ ಪದ್ಧತಿಯಲ್ಲಿ ವಿಶೇಷ ಸುಧಾರಣೆಗಳನ್ನು ಕಾಣುತ್ತಿದ್ದೇವೆ. ಶ್ರೀ ಸಾಮಾನ್ಯರ ಪ್ರಕರಣಗಳು ಎರಡು ವರ್ಷಗಳೊಳಗಾಗಿ ಪೂರ್ಣಗೊಳಿಸುವದರ ಮೂಲಕ ಜನ ಸಾಮಾನ್ಯರಿಗೆ ಆರ್ಥಿಕ ಹೊರೆಯಾಗದಂತೆ ನ್ಯಾಯ ಒದಗಿಸಲು ಈ ಕಾನೂನು ತಿದ್ದುಪಡಿ ಮಾಡಲಾಗಿದೆ ಎಂದು ಸಚಿವ ಎಚ್. ಕೆ. ಪಾಟೀಲ ತಿಳಿಸಿದರು.

ಈ ಕಾರ್ಯಕ್ಕೆ ಪ್ರದೇಶಗಳನ್ನು ಗುರುತಿಸಿ ಒಪ್ಪಿಗೆ ಪಡೆದ ನಂತರವೇ ಪ್ರಾರಂಭಿಸಲಾಗುವದು. ಪ್ರಾಚ್ಯವಸ್ತುಗಳ ಅನ್ವೇಷಣೆಗೆ ಲಕ್ಕುಂಡಿ ಗ್ರಾಮಸ್ಥರು ಸ್ವಯಂ ಪ್ರೇರಿತವಾಗಿ ಮುಂದೆ ಬಂದಿದ್ದು, ಮೊದಲನೇ ಅಭಿಯಾನದಲ್ಲಿಯೇ ಅಂದಾಜು 1200ಕ್ಕಿಂತ ಹೆಚ್ಚಲು ಅವಶೇಷಗಳು ದೊರಕಿವೆ. ಈಗಾಗಲೇ ಲಕ್ಕುಂಡಿ ಗ್ರಾಮದ ಐದು ಮನೆಯವರು ಮುಂದೆ ಬಂದು ಉತ್ಖನನಕ್ಕೆ ತಮ್ಮ ಮನೆ ಬಿಟ್ಟು ಕೊಡುವದಾಗಿ ತಿಳಿಸಿದ್ದಾರೆ. ಲಕ್ಕುಂಡಿಯಲ್ಲಿನ 27 ಮನೆಗಳು ತೆರವಾದರೆ ಅಲ್ಲಿನ ಐದು ದೇವಸ್ಥಾನಗಳು ಸ್ಪಷ್ಟವಾಗಿ ಗೋಚರಿಸುತ್ತವೆ. ಈ ಮನೆಗಳ ಸ್ಥಳಾಂತರಕ್ಕೆ ಮನೆ ಮಾಲಿಕರೊಂದಿಗೆ ಚರ್ಚಿಸಲಾಗಿದೆ ಎಂದು ತಿಳಿಸಿದರು.

> ಲಕ್ಕುಂಡಿಯಲ್ಲಿ ಉತ್ಖನನಕ್ಕೆ ಚಾಲನೆ ನೀಡುವುದು ಅತ್ಯಂತ ಪ್ರಮುಖ ಕಾರ್ಯಕ್ರಮವಾಗಿದೆ. ಇದರಿಂದಾಗಿ ಲಕ್ಕುಂಡಿಯನ್ನು ಯುನೆಸ್ಕೋದ ಜಾಗತಿಕ ಪ್ರವಾಸಿ ತಾಣವನ್ನಾಗಿಸಲು ಅನುಕೂಲವಾಗಲಿದೆ. ಉತ್ಖನನಕ್ಕೆ ಅಗತ್ಯ ಅನುದಾನವನ್ನು ನೀಡಲು ಮುಖ್ಯಂಮತ್ರಿಗಳು ಭರವಸೆ ನೀಡಿದ್ದು, ಉತ್ಖನನ ಕಾರ್ಯವನ್ನು ವೈಜ್ಞಾನಿಕವಾಗಿ, ಆರ್ಥಿಕ ಅಡಚಣೆಯಾಗದಂತೆ ನಡೆಸಲಾಗುವದು. ಮೊದಲನೆ ಹಂತದಲ್ಲಿ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಉತ್ಖನನಕ್ಕೆ ಚಾಲನೆ ನೀಡಲಾಗುವದು.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

ರಾಜ್ಯ ಸರ್ಕಾರವು ಸಿವಿಲ್ ಪ್ರೊಸಿಸರ್ ಕೋರ್ಟ್ ತಿದ್ದುಪಡಿ ಮಾಡಿ ಕೇಸ್ ಮ್ಯಾನೇಜ್‌ಮೆಂಟ್ ಪದ್ಧತಿಗೆ ರಾಷ್ಟ್ರಪತಿಗಳು ಅಂಕಿತ ಹಾಕಿದ್ದು, ವ್ಯಾಜ್ಯದಲ್ಲಿ ಸಿ.ಪಿ.ಸಿ ಅಮೆಂಡಮೆಂಟ್ 2 ಜಾರಿಗೆ ಬಂದಿದೆ ಇದರಲ್ಲಿ ಸಿವಿಲ್ ಕೇಸ್‌ಗೆ ಕಡ್ಡಾಯವಾಗಿ ರಾಜಿಗೆ ಅವಕಾಶ ಮಾಡಿಕೊಡಲಾಗುವದು. ಈ ಸಮಯದಲ್ಲಿ ರಾಜಿ ಆಗದೆ ಇದ್ದಲ್ಲಿ ನ್ಯಾಯಾಲಯದಲ್ಲಿ ಕೇಸ್ ಪ್ರಾರಂಭವಾದ ದಿನದಿಂದ ಕೇಸ್ ತೀರ್ಪು ಕೊಡುವ ದಿನಾಂಕವನ್ನು ನಿಗದಿಪಡಿಸುವದರ ಮೂಲಕ ಕ್ರಾಂತಿಕಾರಕ ಬದಲಾವಣೆ ತರಲಾಗಿದೆ. ಜಿಲ್ಲೆಯಲ್ಲಿ ಮುಂಗಾರು ಪ್ರಾರಂಭವಾದ ಹಿನ್ನೆಲೆಯಲ್ಲಿ ರೈತರಿಗೆ ವಿತರಿಸುವ ಬಿತ್ತನೆ ಬೀಜ ಕಳಪೆಯಾಗಿದ್ದರೆ ಅಂತಹವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವದು ಎಂದು ಸಚಿವರು ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷ ಬಿ.ಬಿ. ಅಸೂಟಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಗದಗ ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಬಸವರಾಜ ಕಡೇಮನಿ ಉಪಸ್ಥಿತರಿದ್ದರು.

## ಇಂದಿನ ನೀರು ಪೂರೈಕೆ ವಿವರ

■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜೂನ್ 03ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 22 – ದೊಡ್ಡ ಮಸೂತಿ ಭಾಗಗಳು, 2000 ಮನೆ, 1,400 ಮನೆ, ಮಸೂತಿ ಹಿಂದಿನ ಭಾಗಗಳು. ವಾರ್ಡ್ ನಂ. 11, 12 – ಕರಿಯಮ್ಮ ಕಲ್ಲು, ಇರಾನಿ ಕಾಲೋನಿ, ಗಣಪತಿ ಕಟ್ಟಿ, ಪಿ ಮತ್ತು ಟಿ ಕ್ವಾರ್ಟರ್ಸ್, ಸಾಯಿನಾಥ ಗುಡಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 2 – ಸೆಟ್ಲಮೆಂಟ್ ಪೂರ್ತಿ ಭಾಗಗಳು, ಹರಣ ಶಿಕಾರಿ ಓಣಿ, ಸಬ್ ಜೈಲ್ ರಸ್ತೆ, ಹನುಮಂತ ದೇವರ ಗುಡಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 33 – ಜಾಕಿರ ಹುಸೇನ್ ಕಾಲೋನಿ, ಗಡ್ಡಿಯವರ ಲೈನ್, ಕೇಶವ ನಗರ, ವೀರೇಶ್ವರ ನಗರ, ಹುಬ್ಬಳ್ಳಿ ರಸ್ತೆ, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 30, 34, 35 – ವಡ್ಡರಗೇರಿ, ಮೂರು ಶಿಳ್ಳಿನ ವಕಾರ, ಹೂಗಾರ ಪ್ಲಾಟ್, ಶಿವಾನಂದ ಗಾರ್ಡನ್, 1, 2, 3ನೇ ಕ್ರಾಸ್‌ಗಳು. ವಾರ್ಡ್ ನಂ. 28, 29 – ಪಂಚಾಕ್ಷರಿ ನಗರ, ರಾಜೀವಗಾಂಧಿ ನಗರ ಉಳಿದ ಕೆಲವು ಭಾಗಗಳು.

**ಪ್ರಕಟಣೆ:** ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ▸▸ 3ನೇ ಪುಟಕ್ಕೆ

## ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಗದಗ ಜಿಲ್ಲಾ ಪ್ರವಾಸ

■ **ವಿಜಯಸಾಕ್ಷಿ ಸುದ್ದಿ, ಗದಗ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜೂನ್ 3ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು ವಿವರ ಇಂತಿದೆ.

ಜೂನ್ 3 ರಂದು ಬೆಳಿಗ್ಗೆ 11.05 ಗಂಟೆಗೆ ಹುಬ್ಬಳ್ಳಿ ವಿಮಾನ ನಿಲ್ದಾಣದಿಂದ ಹೆಲಿಕಾಪ್ಟರ್ ಮೂಲಕ ಹೊರಟು ಬೆಳಿಗ್ಗೆ 11.25 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಆವರಣದ ಹೆಲಿಪ್ಯಾಡ್‌ಗೆ



ಆಗಮಿಸುವರು. ಬೆ 11.40 ಗಂಟೆಗೆ ಗದಗ ತಾಲೂಕಿನ ಲಕ್ಕುಂಡಿ ಗ್ರಾಮದಲ್ಲಿ ಶ್ರೀ ಕೋಟೆ ವೀರಭದ್ರೇಶ್ವರ ದೇವಸ್ಥಾನ ಆವರಣದಲ್ಲಿ ಉತ್ಖನನಕ್ಕೆ ಚಾಲನೆ ನೀಡುವರು. ಬಯಲು ವಸ್ತು ಸಂಗ್ರಹಾಲಯ ಆವರಣದ ಪ್ರಾಚ್ಯಾವಶೇಷಗಳ ವೀಕ್ಷಣೆ , ಶ್ರೀ ಕಾಶಿ ವಿಶ್ವನಾಥ ದೇವಸ್ಥಾನಕ್ಕೆ ಭೇಟಿ ನೀಡುವರು. ಮಧ್ಯಾಹ್ನ 12.40 ಗಂಟೆಗೆ ಲಕ್ಕುಂಡಿ ಗ್ರಾಮದಿಂದ ಹೊರಟು ಗದಗ ನಗರಕ್ಕೆ ಆಗಮಿಸುವರು. ನಗರದ ಎಪಿಎಂಸಿ ಆವರಣದಲ್ಲಿನ ಸ್ವಾಮಿ ವಿವೇಕಾನಂದ ಭವನದಲ್ಲಿ ದಿ.ಕರ್ನಾಟಕ ಕುರುಬರ ಸಂಘ ಹಾಗೂ ಕರ್ನಾಟಕ ಕುರುಬರ ಸಹಕಾರ ಪತ್ತಿನ ಸಂಘ ಗದಗ ವತಿಯಿಂದ ಆಯೋಜಿಸಿರುವ ಶತಮಾನೋತ್ಸವ ಸಮಾರಂಭದಲ್ಲಿ ಭಾಗವಹಿಸುವರು. ಸಂಜೆ 4.30 ಗಂಟೆಗೆ ಗದಗ ನಗರದ ಪಂಡಿತ ಭೀಮಸೇನ ಜೋಶಿ ರಂಗಮಂದಿರದಲ್ಲಿ ಗದಗ ಬೆಟಗೇರಿ ವ್ಯಾಪಾರ , ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರದ ಉದ್ಘಾಟನೆ ಹಾಗೂ 34 ಎಕರೆ ಪ್ರದೇಶದ ಪ್ರಾಧಿಕಾರದ ಪರಿಕಲ್ಪನೆ ಅನಾವರಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಸಂಜೆ 5.30 ಗಂಟೆಗೆ ಜಿಲ್ಲಾಡಳಿತ ಭವನದ ಆವರಣದ ಹೆಲಿಪ್ಯಾಡ್‌ನಿಂದ ಹೆಲಿಕಾಪ್ಟರ್ ಮೂಲಕ ಹುಬ್ಬಳ್ಳಿಗೆ ಪ್ರಯಾಣಿಸುವರು ಎಂದು ಪ್ರಕಟಣೆ ತಿಳಿಸಿದೆ.



## ಸಂಪಾದಕೀಯ

# ಗೃಹಲಕ್ಷ್ಮಿ ಬಗ್ಗೆ ಸಚಿವರ ಹೇಳಿಕೆಗಳು ಖಂಡನೀಯ

ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲು ಪ್ರಮುಖ ಕಾರಣಗಳಲ್ಲಿ ಗೃಹಲಕ್ಷ್ಮಿ ಯೋಜನೆಯು ಒಂದು. ಪ್ರತಿ ತಿಂಗಳು ಕುಟುಂಬದ ಯಜಮಾನಿಗೆ ಪ್ರತಿ ತಿಂಗಳು 2000 ರೂ. ನೀಡುವ ಭರವಸೆ ನೀಡಿ, ಕೋಟ್ಯಾಂತರ ಮಹಿಳೆಯರ ವಿಶ್ವಾಸ ಗಳಿಸಿತ್ತು.

ಆದರೆ, ಇತ್ತೀಚೆಗೆ ಈ ಯೋಜನೆಗೆ ಸಂಬಂಧಿಸಿದಂತೆ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ನೀಡಿರುವ ಹೇಳಿಕೆಗಳು ತೀವ್ರ ವಿವಾದಕ್ಕೆ ಕಾರಣವಾಗಿವೆ.

ಗೃಹಲಕ್ಷ್ಮಿ ಹಣ ಎರಡು ತಿಂಗಳು ತಡವಾದರೆ ಆಕಾಶ ತಲೆ ಮೇಲೆ ಬೀಳುತ್ತಾ? ಎಂಬ ಸತೀಶ್ ಜಾರಕಿಹೊಳಿ ಅವರ ಹೇಳಿಕೆ, ಮತ್ತು ಪ್ರತಿ ತಿಂಗಳು ತಪ್ಪದೇ ಗೃಹಲಕ್ಷ್ಮಿ ಹಣ ಹಾಕುತ್ತೇವೆ ಎಂದು ಎಲ್ಲೂ ಹೇಳಿಲ್ಲ ಎಂಬ ಡಿ.ಕೆ. ಶಿವಕುಮಾರ್ ಅವರ ಹೇಳಿಕೆಗಳು, ಸರ್ಕಾರದ ಬೇಜವಾಬ್ದಾರಿ ಮತ್ತು ಜನರಿಗೆ ನೀಡಿದ ಭರವಸೆಗೆ ದ್ರೋಹ ಎಸಗಿದಂತೆ ಭಾಸವಾಗುತ್ತಿವೆ. ಇದು ಸಂಪೂರ್ಣವಾಗಿ ಖಂಡನೀಯ.

ಮೊದಲನೆಯದಾಗಿ, ಸರ್ಕಾರದ ಪ್ರತಿನಿಧಿಗಳಾಗಿರುವ ಸಚಿವರು ಮತ್ತು ಉಪಮುಖ್ಯಮಂತ್ರಿಗಳು ಇಂತಹ ಸಾರ್ವಜನಿಕ ಹೇಳಿಕೆಗಳನ್ನು ನೀಡುವುದು ಜನರಿಗೆ ಮಾಡಿದ ಅವಮಾನವಾಗಿದೆ. ಸರ್ಕಾರದ ಯೋಜನೆಗಳು ಜನರ ಕಷ್ಟಗಳನ್ನು ನಿವಾರಿಸಲು ಇರುವುದೇ ಹೊರತು, ಅದನ್ನು ನೀಡುವಾಗ ಉಡಾಫೆ ಮಾತುಗಳನ್ನಾಡುವುದಕ್ಕಲ್ಲ.

ಅಸಂಖ್ಯಾತ ಕುಟುಂಬಗಳು, ವಿಶೇಷವಾಗಿ ಬಡ ಮತ್ತು ಮಧ್ಯಮ ವರ್ಗದವರು, ಈ 2000 ರೂ.ಗಳನ್ನು ತಮ್ಮ ದೈನಂದಿನ ಅವಶ್ಯಕತೆಗಳಿಗೆ ಅವಲಂಬಿಸಿರುತ್ತಾರೆ. ಮನೆ ಬಾಡಿಗೆ, ಮಕ್ಕಳ ಶಾಲಾ ಶುಲ್ಕ, ಆಹಾರ, ಔಷಧಿಯಂತಹ ಮೂಲಭೂತ ಅಗತ್ಯಗಳಿಗಾಗಿ ಈ ಹಣವನ್ನು ನಿರೀಕ್ಷಿಸುವ ಲಕ್ಷಾಂತರ ಕುಟುಂಬಗಳಿಗೆ ಆಕಾಶ ತಲೆ ಮೇಲೆ ಬೀಳುತ್ತಾ? ಎಂಬ ಪ್ರಶ್ನೆ ಕೇಳುವುದು ಅವರ ಸಂಕಷ್ಟಗಳನ್ನು ಲೇವಡಿ ಮಾಡಿದಂತಿದೆ.

ಇನ್ನು ಪ್ರತಿ ತಿಂಗಳು ತಪ್ಪದೇ ಹಣ ಹಾಕುತ್ತೇವೆ ಎಂದು ಎಲ್ಲೂ ಹೇಳಿಲ್ಲ ಎಂಬ ಡಿ.ಕೆ. ಶಿವಕುಮಾರ್ ಅವರ ಹೇಳಿಕೆಯು, ಸರ್ಕಾರದ ನೀತಿ ನಿರೂಪಣೆಯಲ್ಲಿನ ಪಾರದರ್ಶಕತೆಯ ಕೊರತೆ ಮತ್ತು ಬದ್ಧತೆಯ ಕೊರತೆಯನ್ನು ಎತ್ತಿ ತೋರಿಸುತ್ತದೆ.

ಚುನಾವಣಾ ಪ್ರಚಾರದ ಸಮಯದಲ್ಲಿ, ಪ್ರತಿ ಹಳ್ಳಿಯಲ್ಲಿ, ಪ್ರತಿ ಮನೆ ಮನೆಗೂ ತೆರಳಿ, ಪ್ರತಿ ತಿಂಗಳು 2000 ರೂ. ನೀಡುವುದಾಗಿ ಸ್ಪಷ್ಟವಾಗಿ ಹೇಳಲಾಗಿತ್ತು. ಇದನ್ನೇ ನಂಬಿ ಮತದಾರರು ಕಾಂಗ್ರೆಸ್ ಪಕ್ಷಕ್ಕೆ ಅಧಿಕಾರ ನೀಡಿದ್ದಾರೆ. ಈಗ ತಮ್ಮದೇ ಭರವಸೆಗಳನ್ನು ತಿರುಚುವ ಪ್ರಯತ್ನ ಮಾಡುವುದು ಜನಾದೇಶಕ್ಕೆ ಅಪಮಾನ ಮಾಡಿದಂತಿದೆ.

ಸರ್ಕಾರಕ್ಕೆ ಕೆಲವು ಆರ್ಥಿಕ ಸವಾಲುಗಳಿರಬಹುದು, ಹಣಕಾಸಿನ ಹೊಂದಾಣಿಕೆಗಳಲ್ಲಿ ಸಮಸ್ಯೆಗಳಿರಬಹುದು. ಆದರೆ, ಅಂತಹ ಸಂದರ್ಭಗಳಲ್ಲಿ ಜನರಿಗೆ ಸ್ಪಷ್ಟವಾದ ಮಾಹಿತಿ ನೀಡಬೇಕು. ಹಣ ವಿಳಂಬವಾಗುವುದಾದರೆ ಅದಕ್ಕೆ ಕಾರಣ ಏನು, ಯಾವಾಗ ಹಣ ಬಿಡುಗಡೆಯಾಗುತ್ತದೆ ಎಂಬ ಬಗ್ಗೆ ಪಾರದರ್ಶಕತೆ ಇರಬೇಕು. ಅದನ್ನು ಬಿಟ್ಟು, ತಡವಾದರೆ ಆಕಾಶ ತಲೆ ಮೇಲೆ ಬೀಳಲ್ಲ ಅಥವಾ ಹೇಳಿಲ್ಲ ಎಂದು ಹೇಳುವುದು, ಜನರ ವಿಶ್ವಾಸವನ್ನು ಕಳೆದುಕೊಳ್ಳುವ ಅಪಾಯಕಾರಿ ನಡೆಯಾಗಿದೆ.

ಒಂದು ಸರ್ಕಾರವು ತನ್ನದೇ ಯೋಜನೆಯ ಬಗ್ಗೆ ಕೇಳಿದ ಪ್ರಶ್ನೆಗಳಿಗೆ ಈ ರೀತಿ ಉತ್ತರಿಸುವುದು ಸರಿಯಲ್ಲ. ಇದು ಜವಾಬ್ದಾರಿಯುತ ಸರ್ಕಾರದ ಲಕ್ಷಣವಲ್ಲ. ಜನರಿಗೆ ನೀಡಿದ ಭರವಸೆಗಳನ್ನು ಈಡೇರಿಸುವ ಬದ್ಧತೆ ಮತ್ತು ಅದನ್ನು ಗೌರವಿಸುವ ವಿನಯ ಸಚಿವರುಗಳಲ್ಲಿ ಇರಬೇಕು. ಗೃಹಲಕ್ಷ್ಮಿ ಯೋಜನೆ ಕೇವಲ ಆರ್ಥಿಕ ನೆರವಲ್ಲ, ಅದು ಮಹಿಳೆಯರ ಸಬಲೀಕರಣದ ಪ್ರತೀಕ. ಅದನ್ನು ಇಂತಹ ಬೇಜವಾಬ್ದಾರಿ ಹೇಳಿಕೆಗಳಿಂದ ದುರ್ಬಲಗೊಳಿಸಬಾರದು.

ಸರಕಾರ ತಕ್ಷಣವೇ ಈ ಹೇಳಿಕೆಗಳ ಬಗ್ಗೆ ಸ್ಪಷ್ಟನೆ ನೀಡಬೇಕು. ಸಾರ್ವಜನಿಕವಾಗಿ ಕ್ಷಮೆಯಾಚಿಸಬೇಕು.

---

**12 ವರ್ಷಗಳಿಗೊಮ್ಮೆ ನಡೆಯುವ ಗ್ರಾಮ ದೇವತೆಗಳ ಜಾತ್ರಾ ಮಹೋತ್ಸವದ ನಿಮಿತ್ತ ವಿಶೇಷ ಲೇಖನ**

# ಭಕ್ತರ ಕಷ್ಟ ಕಳೆಯುವ ಗ್ರಾಮದ ದೇವತೆಗಳು

ಮುಳಗುಂದ ಪಟ್ಟಣದ ಗ್ರಾಮ ದೇವತೆಯರಾದ ದ್ಯಾಮವ್ವ ಹಾಗೂ ದುರ್ಗಮ್ಮಾ ದೇವತೆ ಭಕ್ತರ ಕಷ್ಟ ಕಾರ್ಪಣ್ಯ ಕಳೆಯುವ ದೇವತೆಯಾಗಿದ್ದಾರೆ. ಯಾವದೇ ರೋಗ-ರುಜಿನುಗಳಿಂದ ರಕ್ಷಿಸುವ, ಗ್ರಾಮದ ಜನರಿಗೆ ಆತಂಕಗಳಿಂದ ಕಾಪಾಡುವ ಶಕ್ತಿ ಹೊಂದಿದ ಗ್ರಾಮದೇವತೆಯರ ಮಹಿಮೆ ಅಪಾರ.

ಉತ್ತರ ಕರ್ನಾಟಕದಲ್ಲಿ ಅನಾದಿ ಕಾಲದಿಂದಲೂ ಪ್ರತಿ ಗ್ರಾಮಗಳಲ್ಲೂ ಗ್ರಾಮದೇವತೆಯ ದೇವಸ್ಥಾನವಿರುವದು ಪ್ರತೀತಿ. ಆದರೆ ವಿಶೇಷವಾಗಿ ರೈತರ ಮೊದಲ ಪೂಜೆ ದೇವಿಗೆ ಸಲ್ಲಿಸಿ ನಂತರ ಭೂಮಿಪೂಜೆ ನೆರವೇರಿಸಿ ತಮ್ಮ ಹೊಲಗಳಿಗೆ ಬಿತ್ತನೆ ಹಾಗೂ ರಾಶಿ ಮಾಡುವ ಕೆಲಸ ಮಾಡುತ್ತಾರೆ. ಇತರ ಶುಭ ಕಾರ್ಯಗಳಿಗೆ ದೇವಿಯರಿಗೆ ಉಡಿ ತುಂಬುವ ಕಾರ್ಯ ಮೊದಲು ನೆರವೇರಿಸಿ ನಂತರ ಯಾವದೇ ಕೆಲಸ ಕಾರ್ಯ ನೆರವೇರಿಸಲಾಗುವದು.

ಪಟ್ಟಣದ ಹಳೆಹುಡ ಓಣಿಯಲ್ಲಿ ನೆಲಸಿದ ಗ್ರಾಮ ದೇವತೆಗಳು 200 ವರ್ಷಗಳ ಇತಿಹಾಸ ಹೊಂದಿದ್ದು, ಪ್ರತಿ 12 ವರ್ಷಕ್ಕೊಮ್ಮೆ ಗ್ರಾಮ ದೇವತೆಗಳ



ಜಾತ್ರಾ ಮಹೋತ್ಸವ ಸಂಭ್ರಮದಿಂದ ಜರುಗುವುದು. ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮದ ಜನರ ಆರಾಧ್ಯ ದೇವಿಯಾಗಿ ಗ್ರಾಮದ ರಕ್ಷಣೆಯನ್ನು ಮಾಡುತ್ತಾ, ರೈತರ ಬೆಳೆಗಳಿಗೆ ರಕ್ಷಣೆ ನೀಡುವ ಈ ಗ್ರಾಮ ದೇವತೆ ಮುಳಗುಂದ ಪಟ್ಟಣದಲ್ಲಿ ಅತ್ಯಂತ ಶ್ರದ್ಧಾಭಕ್ತಿಯಿಂದ ಸೌಹಾರ್ದತೆಯಿಂದ ಜಾತಿ, ಮತ, ಭೇದವಿಲ್ಲದೆ ಸರ್ವ ಜನಾಂಗಕ್ಕೂ ಆದಿಶಕ್ತಿಯಾಗಿ ನೆಲೆಸಿ, ಎರಗಿ ಬಂದ ಕಷ್ಟಗಳಿಗೆ ಪರಿಹಾರ ಕಲ್ಪಿಸುವ ಶಕ್ತಿಯಾಗಿದ್ದಾಳೆ.

> ಮುಳಗುಂದ ಪಟ್ಟಣದ ಹಳೆಹುಡದ ಗ್ರಾಮ ದೇವತೆಗಳಾದ ದ್ಯಾಮವ್ವ ಹಾಗೂ ದುರ್ಗಮ್ಮ ದೇವಿ ಜಾತ್ರೆ ಅದ್ದೂರಿಯಿಂದ ಜರಗುಲಿದ್ದು, ನಾಡಿನ ಪ್ರಖ್ಯಾತ ಸಂಗೀತಗಾರರು, ಕಲಾವಿದ ಬಳಗ ಹಾಗೂ ಸಕಲ ವಾದ್ಯ ಮೇಳಗಳಿಂದ ಜಾತ್ರೆ ಜರುಗಲಿದೆ. ಸಕಲ ಸದ್ಭಕ್ತರು ಆಗಮಿಸಿ, ದೇವಿಯ ದರ್ಶನ, ಆಶೀರ್ವಾದ ಪಡೆಯಬೇಕು.
>
> **– ಶಿವಣ್ಣಾ ಎಂ.ನೀಲಗುಂದ.**
> ಜಾತ್ರಾ ಸಮಿತಿ ಗೌರವಾಧ್ಯಕ್ಷ

> ಭಕ್ತರು ದೇವಿಗೆ ತಮ್ಮ ಕಷ್ಟಗಳ ಪರಿಹಾರ ಮಾಡುವಂತೆ ಹರಕೆ ಹೊತ್ತು ಉಡಿ ಕಟ್ಟಿದರೆ ಸಾಕು, ಬಂದ ಕಷ್ಟಗಳು ದೂರವಾಗುತ್ತವೆ ಎಂಬ ನಂಬಿಕೆ ಭಕ್ತಾದಿಗಳಲ್ಲಿದೆ. ಹೀಗಾಗಿ ಪ್ರತಿಯೊಂದು ಕುಟುಂಬದವರಿಗೂ ದ್ಯಾಮವ್ವ ಹಾಗೂ ದುರ್ಗಮ್ಮಾ ಮನೆ ದೇವಿಯಾಗಿದ್ದಾರೆ.
>
> **– ಷಣ್ಮುಖಪ್ಪ ಬಡ್ನಿ.**
> ಟ್ರಸ್ಟ್ ಕಮಿಟಿ ಅಧ್ಯಕ್ಷರು.

ವಿಜಯ ದಶಮಿಯ ಸಂದರ್ಭದಲ್ಲಿ 9 ದಿನಗಳ ಕಾಲ ಸತತ ವಿಶೇಶ ಪೂಜೆ, ಪಾರಾಯಣ, ಪ್ರವಚನಗಳ ಜೊತೆಯಲ್ಲಿ ಭಕ್ತರಿಗೆ ಹೋಳಿಗೆ ಪ್ರಸಾದ ಸೇವೆ ಜರುಗುತ್ತಿರುವುದು ವಿಶೇಷವಾಗಿದೆ. 200 ವರ್ಷಗಳ ಹಿಂದೆ ತಯಾರಾದ ದ್ಯಾಮವ್ವ ಹಾಗೂ ದುರ್ಗಮ್ಮನ ಮೂರ್ತಿ ಹೊಂದಿತ್ತು., ಪ್ರಸ್ತುತ ವರ್ಷ ನೂತನ ಮೂರ್ತಿಯನ್ನು ದಿ. ಆರ್.ಎನ್. ದೇಶಪಾಂಡೆ ಇವರ ಸ್ಮರಣಾರ್ಥ ಅವರ ಸುಪುತ್ರ, ಪ.ಪಂ ಸದಸ್ಯ ನಾಗರಾಜ ದೇಶಪಾಂಡೆ ಮಾಡಿಸಿದ್ದಾರೆ. ಈ 4 ದಿನಗಳ ಕಾಲ ದೇವಿಯು ಊರಿನ 5 ಕಟ್ಟೆ ಮನೆಗಳಿಗೆ (ಗ್ರಾಮದ ಪ್ರಮುಖರ) ಭೇಟಿ ನೀಡಿ ನಂತರ ಚೌತಮನೆಯ ಕಟ್ಟಗೆ ಆಗಮಿಸಿ ವಾಸ್ತವ್ಯ ಹೂಡುವ ಜೊತೆಗೆ ಭಕ್ತರ ಮನೆ ಮನೆಗೆ ತೆರಳಿ ಉಡಿ ತುಂಬುಸಿಕೊಳ್ಳುವ ಕಾರ್ಯ ಜರಗುವುದು. ಪ್ರತಿ ದಿನ ಬೆಳಿಗ್ಗೆಯಿಂದ ಸಾಯಂಕಾಲದವರೆಗೆ ದೇವಿಯ ಮೂರ್ತಿ ಮೆರವಣಿಗೆ ನಡೆಯುವದು.

ಕೊನೆಯ ದಿನ ರಾತ್ರಿಯಿಂದ ಬೆಳಿಗ್ಗವರೆಗೆ ದೇವಿಯ ವೈಭವದ ಮೆರವಣಿಗೆ ಸಕಲ ವಾದ್ಯ ಮೇಳಗಳೊಂದಿಗೆ ಜರುಗುವುದು.

ಈ ಗ್ರಾಮ ದೇವಿಯ ಜಾತ್ರಾ ಮಹೋತ್ಸವಕ್ಕೆ ಪಟ್ಟಣದಲ್ಲಿ ಜನಿಸಿದ ಪ್ರತಿ ಹೆಣ್ಣು ಮಕ್ಕಳು ಈ ಜಾತ್ರಾ ಮಹೋತ್ಸವಕ್ಕೆ ಆಗಮಿಸುವದರಿಂದ ತವರಿನ ಸಿರಿ ಹೆಚ್ಚಿಸುವುದರ ಜೊತೆ-ಗೆ ಗಂಡನ ಮನೆಗೆ ಸಕಲ ಸಮೃದ್ಧಿ ಹೆಚ್ಚಾಗುವುದು ಎಂಭ ಬಲವಾದ ನಂಬಿಕೆ ಈ ಗ್ರಾಮ ದೇವಿಯ ಜಾತ್ರಾ ವಿಶೇಷತೆಯಾಗಿದೆ. 12 ವರ್ಷಕ್ಕೊಮ್ಮೆ ಜರುಗುವ ಈ ಜಾತ್ರೆಯಲ್ಲಿ ಜಾತಿ, ಮತ, ಬೇಧ ಭಾವವಿಲ್ಲದೇ ಎಲ್ಲಾ ಜನಾಂಗದವರು ದೇವಿಗೆ ಉಡಿ ತುಂಬುವ ಕಾರ್ಯದಲ್ಲಿ ಭಾಗಿಯಾಗುತ್ತಾರೆ. ಈ ಜಾತ್ರಾ ಮಹೋತ್ಸವದಲ್ಲಿ ಮಾಂಸಾಹಾರ ಸೇವನೆ ನಿಷಿದ್ಧವಾಗಿದೆ.

**– ಶ್ರೀಕಾಂತ ವೀ.ಸಿದ್ದನಗೌಡರ.**

---

# ಅನಧಿಕೃತ ಕಟ್ಟಡ ತೆರವಿಗೆ ಆಗ್ರಹ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಭರಮದೇವರ ಸರ್ಕಲ್ ಹತ್ತಿರದ ಸರ್ಕಾರಿ ಉರ್ದು ಶಾಲೆ ಜಾಗ ಒತ್ತುವರಿ ಮಾಡಿಕೊಂಡು ಲಾಭದ ಉದ್ದೇಶಕ್ಕಾಗಿ ನಿರ್ಮಿಸುತ್ತಿರುವ ವ್ಯಾಪಾರಿ ಕಟ್ಟಡವನ್ನು ಕೂಡಲೇ ತೆರವುಗೊಳಿಸಬೇಕು ಎಂದು ಸೋಮವಾರ ಲಕ್ಷ್ಮೇಶ್ವರದ ಸಾರ್ವಜನಿಕರು ಜಿಲ್ಲಾಧಿಕಾರಿಗಳಿಗೆ ಮತ್ತು ಸ್ಥಳೀಯ ಪುರಸಭೆಗೆ ಮನವಿ ಸಲ್ಲಿಸಿದರು. ಮನವಿ ಪತ್ರದಲ್ಲಿ, ಸರ್ಕಾರಿ ಉರ್ದು ಶಾಲೆ ಕಟ್ಟಡ ಧಾರವಾರ ಜಿಲ್ಲಾ ಸ್ಕೂಲ್ ಬೋರ್ಡ್ ಹೆಸರಿನಲ್ಲಿದೆ. ಈ ಶಾಲೆಯ ಜಾಗದಲ್ಲಿ ಹೊಸ ಶಾಲಾ ಕಟ್ಟಡ ನಿರ್ಮಾಣವಾಗುತ್ತಿದೆ. ಶಾಲಾ ಕಂಪೌಂಡ್ ಸಣ್ಣದಾಗಿಸಿ ಪೂರ್ವದ ರಸ್ತೆಯ ಕಡೆಗೆ ಮುಸ್ಲಿಂ ಸಮುದಾಯದವರಿಗೆ ವ್ಯಾಪಾರ ಉದ್ದೇಶಕ್ಕಾಗಿ ಯಾವುದೇ ಪರವಾನಗಿ ಇಲ್ಲದೇ ಮಳಿಗೆ ನಿರ್ಮಾಣ ಮಾಡಲಾಗುತ್ತಿದೆ. ಸಾರ್ವಜನಿಕರಿಗೆ ಅತ್ಯಂತ



ಉಪಯುಕ್ತ ಮತ್ತು ಬೆಲೆಬಾಳುವ ಸರ್ಕಾರಿ ಜಾಗೆಯಲ್ಲಿ ಅಂಜುಮನ್ ಸಂಸ್ಥೆಯವರಿಗೆ ಮಳಿಗೆ ನಿರ್ಮಿಸಿಕೊಳ್ಳಲು ಕ್ಷೇತ್ರಶಿಕ್ಷಣಾಧಿಕಾರಿ, ಪಿಡಬ್ಲ್ಯುಡಿ, ಪುರಸಭೆ ಅಧಿಕಾರಿಗಳು, ಧಾರವಾಡ ಡಿಸ್ಟ್ರಿಕ್ಟ್ ಉರ್ದು ಸ್ಕೂಲ್ ಬೋರ್ಡ್‌ನವರೂ ಸಹ ಸಹಕಾರ ನೀಡಿದ್ದಾರೆ. ಈಗಾಗಲೇ ಮಾನ್ಯ ಉಚ್ಚ ನ್ಯಾಯಾಲಯದ ಧಾರವಾಡ ಪೀಠ ಲಕ್ಷ್ಮೇಶ್ವರದಲ್ಲಿ ಅತಿಕ್ರಮಣ ತೆಗೆಯಿಸುವಂತೆ ಆದೇಶಿಸಿದೆ. ಕಟ್ಟಡ ಕಟ್ಟಲು ಅವಕಾಶ ಕೊಡಬಾರದೆಂದು ಸಾರ್ವಜನಿಕರು ಮನವಿ ಸಲ್ಲಿಸಿದ್ದೇವೆ. ಆದಾಗ್ಯೂ ಯಾರದ್ದೋ ಕುಮ್ಮಕ್ಕಿನಿಂದ ರಾಜಾರೋಷವಾಗಿ ಕಟ್ಟಡ ನಿರ್ಮಾಣ ಕಾರ್ಯ ಮುಂದುವರೆದಿದೆ. ಒಂದು ವೇಳೆ ಸಾರ್ವಜನಿಕರ ಮನವಿ ಧಿಕ್ಕರಿಸಿದರೆ ಯಾವುದೆ ಮುನ್ಸೂಸೂಚನೆ ನೀಡದೆ ಜನರು ಉಪವಾಸ ಸತ್ಯಾಗ್ರಹ, ಕಾನೂನು ಹೋರಾಟಕ್ಕೆ ಮುಂದಾಗುತ್ತೇವೆ ಎಂದು ಆಗ್ರಹಿಸಲಾಗಿದೆ. ಈ ವೇಳೆ ಪರಮೇಶ ಲಮಾಣಿ, ಗುರಪ್ಪ ಮುಳಗುಂದ, ಮಂಜುನಾಥ ಮಾಗಡಿ, ಬಸವರಾಜ ಗೋಡಿ, ಮಲ್ಲನಗೌಡ ಪಾಟೀಲ, ಈರಪ್ಪ ರೋಣದ, ಬಸವಣ್ಣೆಪ್ಪ ಮುಳಗುಂದ, ವಿರೂಪಾಕ್ಷಪ್ಪ ಬಳಿಗಾರ, ಚಂದ್ರಶೇಖರ ದಾನಿ, ನಾಗಪ್ಪ ಬಾರಕೇರ, ಬಸವರಾಜ ಕರ್ಜೆಕಣ್ಣವರ, ಪ್ರವೀಣ ಪಾಟೀಲ, ಕಿರಣ ಮ್ಯಾಗೇರಿ, ಮಲ್ಲಪ್ಪ ಅಂಕಲಿ, ಶ್ರೀಕಾಂತ ಪಾಟೀಲ, ಫಕ್ಕಿರೇಶ ಮುಳಗುಂದ, ಮಂಜು ಮುಳಗುಂದ, ಬಾಬು ಬಾಕಳೆ, ಬಸವರಾಜ ಅರಳಿ, ವಿನಾಯಕ ಮ್ಯಾಗೇರಿ, ಲೋಹಿತ ಬುರಡಿ, ಚೇತನ ಹೆಬ್ಬಾಳ ಸೇರಿ ಅನೇಕರಿದ್ದರು.

---


# ಬಡ ಬಾಣಂತಿಗೆ ರೇಷನ್ ಕಿಟ್ ವಿತರಣೆ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಅಂಜುಮನ್ ಸಂಸ್ಥೆಯ ಅಧ್ಯಕ್ಷ ತಾಜುದ್ದೀನ ಕಿಂಡ್ರೀ ಅವರು ತಮ್ಮ 45ನೇ ಜನ್ಮದಿನವನ್ನು ಭಾನುವಾರ ಮಾದರಿ, ವಿಶೇಷವಾಗಿ ಆಚರಿಸಿಕೊಂಡರು.

ಮುಳಗುಂದದ ಸರಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಬಡ ಹಾಗೂ ನಿರ್ಗತಿಕ ಮಹಿಳೆ ಹೆಣ್ಣು ಮಗುವಿಗೆ ಜನ್ಮ ನೀಡಿದ್ದನ್ನು ತಿಳಿದು, ತಮ್ಮ ಸ್ನೇಹಿತರು ಹಾಗೂ ಅಭಿಮಾನಿಗಳೊಂದಿಗೆ ಆಸ್ಪತ್ರೆಗೆ ಭೇಟಿ ನೀಡಿ ಬಡ ಮಹಿಳೆಗೆ ಬಾಣಂತಿ ರೇಷನ್ ಕಿಟ್ ನೀಡಿ ತಾಯಿ-ಮಗುವಿಗೆ ಶುಭ ಹಾರೈಸಿದರು.

ಆರೋಗ್ಯ ಕೇಂದ್ರದಲ್ಲಿ ಪ್ರಸೂತಿ ತಜ್ಞವೈದ್ಯರು ಇಲ್ಲದ ಕಾರಣ ಸ್ಟಾಫ್ ನರ್ಸ್ ಆಗಿರುವ ನಸೀಮಾ ಸಿಸ್ಟರ್, ಸಾವಂತ ಹಾಗೂ ಸಿಬ್ಬಂದಿ ಇಲ್ಲಿ ಬರುವ ಬಡ ಮಹಿಳೆಯರಿಗೆ ಉತ್ತಮ ಚಿಕಿತ್ಸೆ ಮತ್ತು ಆರೈಕೆ ನೀಡುತ್ತಿದ್ದು, ಇದನ್ನರಿತು ಇವರ ಸೇವೆಯನ್ನು ಮೆಚ್ಚಿ ತಾಜುದ್ದೀನ ಕಿಂಡ್ರೀ ಅವರನ್ನೂ ಗೌರವಿಸಿ ಸನ್ಮಾನಿಸಿ, ಅವರ ಸೇವೆಯನ್ನು ಶ್ಲಾಘಿಸಿದರು. ಈ ಸಂದರ್ಭದಲ್ಲಿ ಎ.ಡಿ. ಮುಜಾವರ, ಹೈದರಅಲಿ ಖವಾಸ, ಮುನ್ನಾ ಢಾಲಾಯತ, ದಾವೂದ ಜಮಾಲ್, ಖಲಂದರ ಗಾಡಿ, ದಾವಲಸಾಬ ಲಕ್ಕೇಶ್ವರ, ಇಸಾಕಲಿ ಹೊಸಮನಿ, ಮಾಬುಲಿ ದುರ್ಗಿಗುಡಿ, ಮೆಹಬೂಬ ಕುರ್ತಕೋಟಿ, ನಜೀರ ಢಾಲಾಯತ, ಇಬ್ರಾಹೀಮ ದುರ್ಗಿಗುಡಿ, ಮುಹಮ್ಮದ ಮುಂತಾದವರಿದ್ದರು.



---

**ಪ್ರಾಥಮಿಕ, ಪ್ರೌಢಶಾಲಾ ಮುಖ್ಯ ಶಿಕ್ಷಕರು, ಅಧ್ಯಕ್ಷರುಗಳಿಗೆ 'ಶಾಲಾ ಶಿಕ್ಷಣದಲ್ಲಿ ಮೌಲ್ಯ ಶಿಕ್ಷಣ' ಕುರಿತ ಕಾರ್ಯಾಗಾರ**

# ವಿದ್ಯಾರ್ಥಿಗಳಿಗೆ ಮೌಲ್ಯಯುತ ಶಿಕ್ಷಣ ನೀಡಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಕರು ವಿದ್ಯಾರ್ಥಿಗಳಿಗೆ ಮೌಲ್ಯಯುತ ಶಿಕ್ಷಣವನ್ನು ನೀಡಿ ಸದೃಢ ದೇಶವನ್ನು ನಿರ್ಮಿಸಬೇಕು ಎಂದು ರಾಜ್ಯದ ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸೋಮವಾರ ಗದಗ ತಾಲೂಕಿನ ಪ್ರಾಥಮಿಕ ಹಾಗೂ ಪ್ರೌಢಶಾಲಾ ಮುಖ್ಯ ಶಿಕ್ಷಕರು ಹಾಗೂ ಅಧ್ಯಕ್ಷರುಗಳಿಗೆ ಹಮ್ಮಿಕೊಂಡಿದ್ದ 'ಶಾಲಾ ಶಿಕ್ಷಣದಲ್ಲಿ ಮೌಲ್ಯ ಶಿಕ್ಷಣ' ಕುರಿತ ಕಾರ್ಯಾಗಾರದಲ್ಲಿ ಭಾಗವಹಿ ಅವರು ಮಾತನಾಡಿದರು.

> ಜೆ.ಕೆ. ಜಮಾದರ ಮಾತನಾಡಿ, ಶಿಕ್ಷಣದ ಮೂಲ ಉದ್ದೇಶ ಒಬ್ಬ ಕಾಡು ಮನುಷ್ಯನನ್ನು ಬುದ್ಧಿವಂತರಾಗಿ, ಹೃದಯವಂತರಾಗಿ, ಸಮಾಜಪ್ರಿಯ ವ್ಯಕ್ತಿಯನ್ನಾಗಿ ನಿರ್ಮಿಸಲು ಕೆ.ಎಚ್. ಪಾಟೀಲ ಪ್ರತಿಷ್ಠಾನದ ಮೂಲಕ ಸಾಕಷ್ಟು ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ. ಪ್ರಾಥಮಿಕ ಶಾಲೆಯಲ್ಲಿ ಮಕ್ಕಳಿಗೆ ಮೌಲ್ಯಗಳ ಕುರಿತು ಸರಿಯಾಗಿ ಮನನವಾಗುವ ಹಾಗೆ ಶಿಕ್ಷಣ ನೀಡಬೇಕು. ಮಕ್ಕಳಲ್ಲಿ ರಾಷ್ಟ್ರಭಕ್ತಿ, ಸಮಾನತೆ, ಸೇವಾಭಾವ, ಸ್ವಾವಲಂಬನೆಗಳಂತಹ ಮೌಲ್ಯಗಳು ಇರುವ ಹಾಗೆ ವಿದ್ಯಾರ್ಥಿಗಳನ್ನು ಮಾನಸಿಕವಾಗಿ ಸಿದ್ಧಗೊಳಿಸಬೇಕು ಎಂದರು.

ನಾವು ಮಾಡುವ ಕಾರ್ಯಗಳು ಮಕ್ಕಳ ಮೇಲೆ ಪರಿಣಾಮ ಬೀರುತ್ತವೆ. ಹಾಗಾಗಿ ನಾವು ಉತ್ತಮ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು. ಅಂದಾಗ ಮಾತ್ರ ಆದರ್ಶ ಸಮಾಜ ನಿರ್ಮಾಣವಾಗುತ್ತದೆ. ಆದರ್ಶ, ಪ್ರಾಮಾಣಿಕತೆ, ನಂಬಿಕೆ ಎನ್ನುವ ಮೌಲ್ಯಗಳ ಕುರಿತು ಮಾತನಾಡಲು ಹೆದರಿಕೆ ಬರುವ ಸಮಯದಲ್ಲಿ ಗದಗ ತಾಲೂಕಿನ ಶಿಕ್ಷಕರು ವಿದ್ಯಾರ್ಥಿಗಳ ಬದುಕನ್ನು ಬದಲಾಯಿಸಲು ವಿಶೇಷ ಪ್ರಯತ್ನ ಮಾಡುತ್ತಿರುವುದು ಸಂತೋಷದ ಸಂಗತಿ ಎಂದರು.

ಶಾಲಾ ಮಕ್ಕಳಿಗೆ ಬಿಸಿಯೂಟ, ಸಮವಸ್ತ್ರ, ಶೂ, ಹಾಲು ಹೀಗೆ ನಾನಾ ಯೋಜನೆಗಳನ್ನು ತಂದು ಅನೇಕ ವಿದ್ಯಾರ್ಥಿಗಳನ್ನು ಶಾಲೆಗೆ ಕರೆತರಲಾಗಿದೆ. ಇನ್ನು ಬಾಕಿ ಉಳಿದ ವಿದ್ಯಾರ್ಥಿಗಳನ್ನು ಶಾಲೆಗೆ ಪುನಃ ಕರೆತಂದು ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಬೇಕು ಎಂದು ನುಡಿದರು. ಸ್ವಾಮಿ ನಿರ್ಭಯನಂದರು ಮಾತನಾಡಿ, ನಮ್ಮ ದೇಶದ ಶಿಕ್ಷಣ ವ್ಯವಸ್ಥೆಯನ್ನು ಮೊದಲು ಬದಲಾಯಿಸಬೇಕು. ಮಗು ಮಾತೃ ಭಾಷೆಯಲ್ಲಿಯೇ ತಮ್ಮ ಪ್ರಾಥಮಿಕ ಶಾಲೆಯನ್ನು ಕಲಿಯಬೇಕು. ಸ್ವಾಮಿ ವಿವೇಕಾನಂದರ ಕಲ್ಪನೆಯ ಭಾರತ ನಿರ್ಮಾಣ ಮಾಡಲು ನಮ್ಮೆಲ್ಲರ ಮಾರ್ಗದರ್ಶನ ಸದಾ ಇರುತ್ತದೆ ಎಂದರು. ಈ ಸಂದರ್ಭದಲ್ಲಿ ಸ್ವಾಮಿ ಶಿವಾಪ್ರಿಯಾನಂದರು, ಡಿ.ಆರ್. ಪಾಟೀಲ, ಬಿ.ಬಿ. ಅಸೂಟಿ, ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಸಿಇಒ ಭರತ್ ಎಸ್, ಪ್ರವಾಸೋದ್ಯಮ ಇಲಾಖೆ ನಿರ್ದೇಶಕ ರಾಜೇಂದ್ರ, ಡಿಡಿಪಿಐ ಆರ್.ಎಸ್. ಬುರಡಿ, ಶಾಲಾ ಮುಖ್ಯ ಶಿಕ್ಷಕರು, ಎಸ್‌ಡಿಎಂಸಿ ಅಧ್ಯಕ್ಷರು ಹಾಜರಿದ್ದರು.

---

**ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯ ಕೋಟೆ ವೀರಭದ್ರೇಶ್ವರ ದೇವಸ್ಥಾನ ಆವರಣದಲ್ಲಿ ಆಯೋಜನೆ**

# ಉತ್ಖನನ ಕಾರ್ಯಕ್ರಮಕ್ಕೆ ಚಾಲನೆ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪ್ರವಾಸೋದ್ಯಮ ಇಲಾಖೆ ಬೆಂಗಳೂರು, ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಮೈಸೂರು, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಇವರುಗಳ ಸಹಯೋದಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯ ಕೋಟೆ ವೀರಭದ್ರೇಶ್ವರ ದೇವಸ್ಥಾನ ಆವರಣದಲ್ಲಿ ಜೂನ್ 3ರಂದು ಉತ್ಖನನಕ್ಕೆ ಚಾಲನೆ ನೀಡುವ ಕಾರ್ಯಕ್ರಮ ಜರುಗಲಿಗೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉತ್ಖನನ ಕಾರ್ಯಕ್ರಮಕ್ಕೆ ಚಾಲನೆ ನೀಡುವರು. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಪ್ರಾಚ್ಯಾವಶೇಷಗಳ ಡಿಜಿಟಲ್ ದಾಖಲೀಕರಣ ಕಾರ್ಯಕ್ಕೆ ಚಾಲನೆ ನೀಡುವರು. ನರಗುಂದ ಶಾಸಕ ಸಿ.ಸಿ. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿ ಸಲ್ಮಾ ಫಾಹಿಮ್, ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ, ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌದರಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಪ್ರವಾಸೋದ್ಯಮ ಇಲಾಖೆ ಆಯುಕ್ತ ಕೆ.ವಿ. ರಾಜೇಂದ್ರ, ಜಿ.ಪಂ ಸಿಇಓ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಆಯುಕ್ತ ದೇವರಾಜು ಎ, ಪುರಾತತ್ವ ಅಧೀಕ್ಷಕರು ನಿವೃತ್ತಿ ಮತ್ತು ಉತ್ಖನನ ನಿರ್ದೇಶಕ ಟಿ.ಎಂ. ಕೇಶವ, ಪುರಾತತ್ವ ಉತ್ಖನನ ಸಹ ನಿರ್ದೇಶಕ ಡಾ. ಆರ್. ಶೇಜೇಶ್ವರ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ರಾಜ್ಯ ಸಮಿತಿ ಸದಸ್ಯರಾದ ಸಿ.ಜಿ. ಬೆಟಸೂರಮಠ, ಸಿದ್ಧಲಿಂಗೇಶ್ವರ ಎಚ್.ಪಾಟೀಲ, ಗೀತಾಂಜಲಿ ರಾವ್, ಅ.ಧ. ಕಟ್ಟಿಮನಿ ವಿಶೇಷ ಆಹ್ವಾನಿತರಾಗಿ ಆಗಮಿಸುವರು.

> ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಸಂಸದರಾದ ಪಿ.ಸಿ. ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಲಕ್ಕುಂಡಿ ಗ್ರಾ.ಪಂ ಅಧ್ಯಕ್ಷ ಕೆಂಚಪ್ಪ ಎಸ್.ಪೂಜಾರ, ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ ಆಗಮಿಸಲಿದ್ದಾರೆ.

ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಆಯುಕ್ತ ಡಾ. ಶರಣು ಗೋಗೇರಿ, ಧಾರವಾಡ ಪುರಾತತ್ವ ಸಂರಕ್ಷಣಾ ಅಭಿಯಂತರ ಆರ್.ಬಿ. ಶ್ರೀಖಂಡೆ, ಸಂರಕ್ಷಣಾ ಸಹಾಯಕರಾದ ಸುವರ್ಣ ಕ್ಷೀರಸಾಗರ ಅವರು ಸರ್ವರಿಗೂ ಸ್ವಾಗತ ಕೋರಿದ್ದಾರೆ.

---

# ವಿದ್ಯಾರ್ಥಿಗೆ ವಾರ್ಷಿಕ ಕಲಿಕಾ ಶುಲ್ಕದ ನೆರವು

**■ವಿಜಯಸಾಕ್ಷಿ ಸುದ್ದಿ, ಗದಗ**

ಸ್ಥಳೀಯ ಡಾ. ಜಾಕೀರ ಹುಸೇನ ಕಾಲೋನಿಯ ಮುಸ್ಲಿಂ ಜಮಾತ ಗದಗ ವತಿಯಿಂದ ಬಡ ಹಾಗೂ ಜಾಣ ವಿದ್ಯಾರ್ಥಿಗೆ ಶಾಲೆಯ ವಾರ್ಷಿಕ ಕಲಿಕಾ ಶುಲ್ಕ ನೀಡಿ ಸಹಾಯ ಮಾಡಿದರು.

ಗದಗ ಶಹರದ ರಾಯಲ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ 2ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ



ವಿದ್ಯಾರ್ಥಿ ರಿಹಾನ ಮಾಬುಸಾಬ ಘಣಿಬಂದ ಇವನ ವಾರ್ಷಿಕ ಕಲಿಕಾ ಶುಲ್ಕ 18,397 ರೂಪಾಯಿಗಳನ್ನು ಜಾಕೀರ ಹುಸೇನ ಕಾಲೋನಿ ಮುಸ್ಲಿಂ ಜಮಾತಿನ ವತಿಯಿಂದ ಜಮಾತಿನ ಅಧ್ಯಕ್ಷರಾದ ಎಸ್.ಎ. ಟೋಪಿವಾಲೆ, ಸದಸ್ಯರಾದ ಎಂ.ಸಿ. ಶೇಖ್, ಎಂ.ಎಲ್. ಗುಳೇದಗುಡ್ಡ ಹಾಗೂ ಶಬ್ಬೀರ್ ಶಿರಹಟ್ಟಿ ಇವರು ಸದರಿ ವಿದ್ಯಾರ್ಥಿಯ ಶಾಲೆಗೆ ಹೋಗಿ ಶಾಲೆಯ ಮುಖ್ಯೋಪಾಧ್ಯಾಯರಾದ ಎ.ಎಮ್. ಢಾಲಾಯತ ಇವರ ಸಮ್ಮುಖದಲ್ಲಿ ಈ ವರ್ಷದ ಕಲಿಕಾ ಶುಲ್ಕದ ಚೆಕ್ ಅನ್ನು ನೀಡಿದರು. ಈ ಸಂದರ್ಭದಲ್ಲಿ ವಿದ್ಯಾರ್ಥಿ ಹಾಗೂ ಅರುಣಕುಮಾರ ಗಣಾಚಾರಿ ಉಪಸ್ಥಿತರಿದ್ದರು.

### ಪತ್ರಿಕಾಗೋಷ್ಠಿಯಲ್ಲಿ ಜಾತ್ರಾ ಸಮಿತಿಯ ಗೌರವಾಧ್ಯಕ್ಷ ಶಿವಣ್ಣಾ ನೀಲಗುಂದ ಮಾಹಿತಿ

# ಗ್ರಾಮದೇವತೆ ಟೋಪ ಜಾತ್ರೆ ಇಂದಿನಿಂದ

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮುಳಗುಂದ ಪಟ್ಟಣದ ಹಳೆಹುಡದ ಶಕ್ತಿಪೀಠದಲ್ಲಿ ವಿರಾಜಮಾನಳಾದ ಶ್ರೀ ಗ್ರಾಮದೇವತೆಯ ಜಾತ್ರಾ ಮಹೋತ್ಸವವು ಜೂನ್ 3ರಿಂದ 6ವರಗೆ ಮುಳಗುಂದ ಗವಿಮಠ ಹಾಗೂ ಧಾರವಾಡ ಮುರುಘಾಮಠದ ಡಾ. ಮಲ್ಲಿಕಾರ್ಜುನ ಮಾಹಾಸ್ವಾಮಿಗಳ ನೇತೃತ್ವದಲ್ಲಿ ಪಟ್ಟಣದ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯ ಆವರಣದಲ್ಲಿ ಜರುಗಲಿದೆ ಎಂದು ಗ್ರಾಮ ಜಾತ್ರಾ ಸಮಿತಿಯ ಗೌರವಾಧ್ಯಕ್ಷ ಶಿವಣ್ಣಾ ನೀಲಗುಂದ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಜೂ. 3ರಂದು ಬೆಳಿಗ್ಗೆ 9 ಗಂಟೆಗೆ ಗ್ರಾಮದೇವತೆಯ ಪುರಪ್ರವೇಶ ಕೌಲಪೇಟಿಯ ಶ್ರೀ ದುರ್ಗಾದೇವಿಯ ಮಂದಿರಕ್ಕೆ ಹೋಗುವುದು. ನಂತರ ಕಟ್ಟೆ ಮನೆಗಳಿಗೆ ದಯಮಾಡಿಸಿ ಭಕ್ತರಿಂದ ಉಡಿ ತುಂಬುವ ಕಾರ್ಯದ ನಂಯರ ಚೌತ ಮನೆಯಲ್ಲಿ ವಿರಾಜಮಾನಳಾಗುವಳು. ಸಾಯಂಕಾಲ 6 ಗಂಟೆಗೆ ಜಾತ್ರಾ ಮಹೋತ್ಸವದ ಉದ್ಘಾಟನಾ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಡಾ.ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ವಹಿಸಿಕೊಳ್ಳುವರು. ಸಮ್ಮುಖವನ್ನು ಗದಗ ಅಡವೀಂದ್ರಮಠದ ಮಹೇಶ್ವರ ಸ್ವಾಮೀಜಿ, ಉದ್ಘಾಟನೆಯನ್ನು ಕಲಕೇರಿಯ ಪಂ.ಡಾ. ರಾಜಗುರು ಗುರುಸ್ವಾಮಿ ನೆರವೇರಿಸುವರು.

ಅಧ್ಯಕ್ಷತೆಯನ್ನು ಟೋಪ ಜಾತ್ರಾ ಸಮಿತಿ ಗೌರವಾಧ್ಯಕ್ಷ ಶಿವಣ್ಣಾ ನೀಲಗುಂದ, ಮುಖ್ಯ ಅತಿಥಿಗಳಾಗಿ ಸಚಿವ ಎಚ್.ಕೆ. ಪಾಟೀಲ, ಮಾಜಿ ಮುಖ್ಯಮಂತ್ರಿ, ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಪ.ಪಂ ಅಧ್ಯಕ್ಷೆ ಯಲ್ಲವ್ವ ಕವಲೂರ ಪಾಲ್ಗೊಳ್ಳುವರು. ನೂತನ ಮೂರ್ತಿ ದಾನಿ ನಾಗರಾಜ ದೇಶಪಾಂಡೆ ದಂಪತಿಗಳಿಗೆ ಹಾಗೂ ಮೂರ್ತಿ ಶಿಲ್ಪಿ ನಾಗಲಿಂಗ ಬಡಿಗೇರ ದಂಪತಿಗಳನ್ನು ಸನ್ಮಾನಿಸಲಾಗುವುದು. ಸಂಗೀತ ಸೇವೆ ರಾಯಚೂರಿನ ಪ್ರಖ್ಯಾತ ವಚನ ಗಾಯಕ ಅಂಬಯ್ಯ ನೂಲ್ವಿ ಇವರಿಂದ ಜರಗುವುದು.



ಜೂ. 4ರಂದು ಬೆಳಿಗ್ಗೆ 9 ಗಂಟೆಗೆ ಗ್ರಾಮದೇವತೆ ರಥವು ಚೌತಿಮನೆಯಿಂದ ಹೊರಟು ದೇವಿಕಟ್ಟೆಗಳಿಗೆ ದಯಮಾಡಿಸಿ ಭಕ್ತರಿಂದ ದೇವಿಗೆ ಉಡಿ ತುಂಬುವ ಕಾರ್ಯ ನಂತರ ಚೌತಮನೆಗೆ ಬಂದು ವಾಸ್ತವ್ಯ ಹೂಡುವಳು. ಸಾಯಂಕಾಲ 6 ಗಂಟೆಗೆ ಧರ್ಮಸಭೆ 1ರ ದಿವ್ಯ ಸಾನ್ನಿಧ್ಯವನ್ನು ಬಳಗಾನೂರ ಚಿಕ್ಕೆನಕೊಪ್ಪ ಚನ್ನವೀರ ಶರಣರಮಠದ ಶಿವಶಾಂತವೀರ ಶರಣರು, ಸಮ್ಮುಖವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು, ಅಧ್ಯಕ್ಷತೆಯನ್ನು ಟೋಪ ಜಾತ್ರಾ ಸಮಿತಿ ಅಧ್ಯಕ್ಷ ಎಂ.ಡಿ. ಬಟ್ಟೂರ ವಹಿಸುವರು.

ಮುಖ್ಯ ಅತಿಥಿಗಳಾಗಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ, ಮಾಜಿ ಶಾಸಕ ಡಿ.ಆರ್. ಪಾಟೀಲ್, ಯುವ ಧುರೀಣ ಆನಂದ ಗಡ್ಡದೇವರಮಠ, ಪ.ಪಂ ಉಪಾಧ್ಯಕ್ಷೆ ಅನಸೂಯಾ ಸೋಮಗೇರಿ ಪಾಲ್ಗೊಳ್ಳುವರು. ಉಪನ್ಯಾಸಕರಾಗಿ ರಾಯಭಾಗದ ಪ್ರೊ. ವಿ.ಎಸ್. ಮಾಳಿ, ಸನ್ಮಾನ ದಾಸೋಹಿಗಳಿಗೆ, ಸಂಗೀತ ಸೇವೆ ಧಾರವಾಡದ ಖ್ಯಾತ ಹಿಂದೂಸ್ಥಾನಿ ಗಾಯಕ ಪಂ. ಡಾ. ಎಂ.ವೆಂಕಟೇಶಕುಮಾರ ಇವರಿಂದ ಹಾಗೂ ವಿವಿಧ ಕಲಾವಿದರಿಂದ ಮನೋರಂಜನಾ ಕಾರ್ಯಕ್ರಮಗಳು ಜರುಗುವವು.

ಜೂ.5ರಂದು ಬೆಳಿಗ್ಗೆ 9 ಗಂಟೆಗೆ ಗ್ರಾಮದೇವತೆ ರಥವು ಚೌತಮನೆಯಿಂದ ಹೊರಟು ದೇವಿಕಟ್ಟೆಗಳಿಗೆ ದಯಮಾಡಿಸಿ ಭಕ್ತರಿಂದ ಉಡಿ ತುಂಬಿಕೊಳ್ಳುವುದು ನಂತರ ಚೌತಮನೆಗೆ ಬಂದು ವಾಸ್ತವ್ಯ ಹೂಡುವಳು. ಸಾಯಂಕಾಲ 6 ಗಂಟೆಗೆ ಧರ್ಮಸಭೆ-2ರ ದಿವ್ಯ ಸಾನ್ನಿಧ್ಯವನ್ನು ಹೊಸಳ್ಳಿ ಜಗದ್ಗುರು ಬೂದೀಶ್ವರ ಸಂಸ್ಥಾನಮಠದ ಅಭಿನವ ಬೂದೀಶ್ವರ ಮಾಹಾಸ್ವಾಮಿಗಳು, ಅಧ್ಯಕ್ಷತೆಯನ್ನು ಗೌರಮ್ಮಾ ಬಡ್ನಿ ವಹಿಸುವರು. ಮುಖ್ಯ ಅತಿಥಿಗಳಾಗಿ ರೋಣ ಶಾಸಕ ಜಿ.ಎಸ್. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಹುಬ್ಬಳ್ಳಿ ಧಾರವಾಡ ಮಾಹಾನಗರ ಪಾಲಿಕೆ ಸದಸ್ಯ ರಾಜಣ್ಣ ಕೊರವಿ, ಪ.ಪಂ ಸ್ಥಾಯಿ ಸಮಿತಿ ಅಧ್ಯಕ್ಷ ಇಮಾಮಸಾಬ ಶೇಖ ಪಾಲ್ಗೊಳ್ಳುವರು. ಉಪನ್ಯಾಸಕರಾಗಿ ಗದಗ ಜಿಲ್ಲಾ ಖಜಾನಾಧಿಕಾರಿ ಹಾಗೂ ಕವಿಗಳಾದ ವಿ.ಹಿರಿನಾಥಬಾಬು, ಸಂಗೀತ ಸೇವೆ ಹುಬ್ಬಳ್ಳಿಯ ಖ್ಯಾತ ಹಿಂದೂಸ್ಥಾನಿ ಗಾಯಕ ಬಾಲಚಂದ್ರ ನಾಕೋಡ ಇವರಿಂದ ನೆರವೇರುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಟ್ರಸ್ಟ್ ಅಧ್ಯಕ್ಷ ಷಣ್ಮುಖಪ್ಪ ಬಡ್ನಿ, ಉಪಾಧ್ಯಕ್ಷ ಅಶೋಕ ಸೋನಗೋಜಿ, ಚನ್ನಪ್ಪ ಕರಿಗೂಳಪ್ಪನವರ, ನಾಗರಾಜ ನೀಲಗುಂದ, ರಾಮಣ್ಣಾ ಕಮಾಜಿ, ಕೆ.ಎಲ್. ಕರಿಗೌಡರ, ಬಸವರಾಜ ಹಾರೋಗೇರಿ, ಪಿ.ಎ. ವಂಟಕರ ಇದ್ದರು.

ಜೂನ್ 3ರಿಂದ 5ರವರೆಗೆ ಸಾಯಂಕಾಲ 6ರಿಂದ 7 ಗಂಟೆಯವರೆಗೆ ರೇವಣಶಿದ್ದಯ್ಯ ಮರಿದೇವರಮಠ ಹಾಗೂ ವಿಜಯಲಕ್ಷ್ಮಿ ಹಿರೇಮಠ ಇವರಿಂದ ಸಂಗೀತ ಸೇವೆ ಜರಗುವುದು. ತುಮಕೂರಿನ ಕಿನ್ನರಿ ಲೋಕೇಶ ಇವರಿಂದ ಹಾಗೋರಿ ಭದ್ರಕಾಳಿ ವೀರಗಾಸೆ, ಮಹಿಳಾ ಡೊಳ್ಳು ಕುಣಿತ, ಮಹಿಳಾ ವೀರಗಾಸೆ ಪೂಜಾ ಕುಣಿತ, ಪಾರಿವಾಳ ಕುಣಿತ, ಗೊಂಬೆ ಕುಣಿತ, ಹನುಮವೇಷಗಳು ಜರುಗಲಿವೆ.

ಪ್ರತಿದಿನ ಮಧ್ಯಾಹ್ನ ಶೇಖಿ ಓಣಿಯ ಉರ್ದು ಶಾಲೆಯಲ್ಲಿ ಹಾಗೂ ದಿ. ಈರಮ್ಮಾ ಚನ್ನಬಸಪ್ಪ ಕಮಾಜಿ ಇವರ ಸ್ಮರಣಾರ್ಥ ರಾಮಣ್ಣಾ ಕಮಾಜಿ ಇವರಿಂದ, ಪ್ರತಿದಿನ ರಾತ್ರಿ ಬಾಲಲೀಲಾ ಮಾಹಾಂತ ಶಿವಯೋಗಿ ಕಲಾಭವನದಲ್ಲಿ ದಿ. ಚಂದ್ರಶೇಖರಪ್ಪ ಬಡ್ನಿ ಹಾಗೂ ದಿ.ಮಾಹಾಂತಪ್ಪ ಬಡ್ನಿ ಇವರ ಸ್ಮರಣಾರ್ಥ ಷಣ್ಮುಖಪ್ಪ ಬಡ್ನಿ, ಬಸವರಾಜ ಬಡ್ನಿ, ಮುರುಗೇಶ ಬಡ್ನಿ ಇವರಿಂದ ದಾಸೋಹ ಜರಗುವುದು.

## ಸಿಎಂ ಸಿದ್ದರಾಮಯ್ಯರಿಂದ ಜಿ-ಎನ್‌ಟಿಟಿಎಫ್ ಉದ್ಘಾಟನೆ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಹುಬ್ಬಳ್ಳಿ ರಸ್ತೆಯ ಜಿಲ್ಲಾಧಿಕಾರಿ ಕಚೇರಿ ಎದುರಿನ ಜಿ-ಎನ್‌ಟಿಟಿಎಫ್ ಆವರಣದಲ್ಲಿ ದಿ. ಗದಗ ಕೋ-ಆಪ್ ಇಂಡಸ್ಟ್ರಿಯಲ್ ಎಸ್ಟೇಟ್ ಲಿ ಸಹಯೋಗದಲ್ಲಿ ಆರಂಭಗೊಂಡಿರುವ ಜಿ-ಎನ್‌ಟಿಟಿಎಫ್‌ನ ಉದ್ಘಾಟನಾ ಸಮಾರಂಭ ಜೂನ್ 3ರಂದು ಮಧ್ಯಾಹ್ನ 3ಕ್ಕೆ ನೆರವೇರಲಿದೆ.




ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸುವರು. ಎನ್‌ಟಿಟಿಎಫ್ ಎಂಡಿ ರವಿ ಟೆನ್ನೆಟಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಅತಿಥಿಗಳಾಗಿ ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ನರಗುಂದ ಶಾಸಕ ಸಿ.ಸಿ. ಪಾಟೀಲ, ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ಡಿ.ಆರ್. ಪಾಟೀಲ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಜಿ.ಪಂ ಮಾಜಿ ಅಧ್ಯಕ್ಷೆ ಸುಜಾತಾ ದೊಡ್ಡಮನಿ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ ಪಾಲ್ಗೊಳ್ಳುವರು ಎಂದು ಜಿಸಿಐಇ ಅಧ್ಯಕ್ಷ ಆರ್.ಆರ್. ಓದುಗೌಡರ, ಉಪಾಧ್ಯಕ್ಷ ಪಿ.ಬಿ. ದಂಡಾವತಿಮಠ, ಜಿ-ಎನ್‌ಟಿಟಿಎಫ್‌ನ ಚೇರಮನ್ ಕೃಷ್ಣಗೌಡ ಎಚ್.ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾಸಿಕ ಶಿವಾನುಭವ ಕಾರ್ಯಕ್ರಮ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಅಡವೀಂದ್ರ ಸ್ವಾಮಿಮಠದಲ್ಲಿ ಜೂನ್ 3ರಂದು ಸಂಜೆ 6.30 ಗಂಟೆಗೆ 336ನೇ ಮಾಸಿಕ ಶಿವಾನುಭವ ಜರುಗಲಿದೆ.

ಸಾನ್ನಿಧ್ಯವನ್ನು ಅಡ್ನೂರ ದಾಸೋಹ ಮಠದ ಪೂಜ್ಯ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು, ಸಮ್ಮುಖವನ್ನು ಪಂ.ಡಾ. ಗುರುಸ್ವಾಮಿ ಕಲಕೇರಿ ವಹಿಸುವರು. ಹುಬ್ಬಳ್ಳಿಯ ವಿಜಯಮಹಾಂತೇಶ ಲಲಿತಕಲಾ ಮಹಾವಿದ್ಯಾಲಯದಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ ನಿವೃತ್ತರಾದ ಶ್ರೀಮಠದ ಧರ್ಮದರ್ಶಿ ಮಹೇಶ್ವರ ಸ್ವಾಮಿಗಳು ಹೊಸಳ್ಳಿಮಠ ಅವರಿಗೆ ಗುರುವಂದನೆ ಹಾಗೂ ಸನ್ಮಾನ ಜರುಗುವದು. ಅಧ್ಯಕ್ಷತೆಯನ್ನು ಶಿವಾನುಭವ ಸಮಿತಿಯ ಅಧ್ಯಕ್ಷ ಡಾ. ಎಸ್.ಕೆ. ನಾಲತ್ವಾಡಮಠ ವಹಿಸುವರು. ಜಾತ್ರಾ ಮಹೋತ್ಸವ ಸಮಿತಿಯ ಅಧ್ಯಕ್ಷ ಬಿ.ಎಸ್. ಪಲ್ಲೇದ ಉಪಸ್ಥಿತರಿರುವರು. ಪರಶುರಾಮ ಮಹೇಂದ್ರಕರ ಅವರಿಂದ ಉಪನ್ಯಾಸ ಜರುಗಲಿದ್ದು, ಅತಿಥಿಗಳಾಗಿ ತುಕಾರಾಮ ಬೇಂದ್ರೆ ಆಗಮಿಸುವರು, ಶೈಲೇಂದ್ರಕುಮಾರ ಶಹಾ ಅವರಿಗೆ ಸನ್ಮಾನವಿದೆ.

ಪ್ರಸಾದ ಸೇವೆಯನ್ನು ನಗರಸಭಾ ಸದಸ್ಯೆ ಲಕ್ಷ್ಮವ್ವ ಭಜಂತ್ರಿ, ಡಾ. ಎಸ್.ಕೆ. ನಾಲತ್ವಾಡಮಠ ಹಾಗೂ ಶಿವಕುಮಾರ ಬಳಿಗಾರ ವಹಿಸಿಕೊಂಡಿದ್ದು, ಸರ್ವರಿಗೂ ಸ್ವಾಗತವಿದೆ ಎಂದು ಶಿವಾನುಭವ ಸಮಿತಿ ತಿಳಿಸಿದೆ.

### ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿಗಳು

# ಅರ್ಥಪೂರ್ಣ ಆಚರಣೆಗೆ ಕ್ರಮ ವಹಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಜೂನ್ 12ರಂದು ನಗರದ ಆಡಿಟೋರಿಯಂ ಹಾಲ್‌ನಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ ಆಚರಿಸಲಾಗುತ್ತಿದ್ದು, ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.



ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ ಮಾಡುವುದೇ ಈ ದಿನಾಚರಣೆಯ ಪ್ರಮುಖ ಉದ್ದೇಶವಾಗಿದ್ದು, ಈ ನಿಟ್ಟಿನಲ್ಲಿ ಕಾರ್ಮಿಕ ಇಲಾಖೆಯೊಂದಿಗೆ ವಿವಿಧ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಬೇಕು. ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳು ಪರಿಣಾಮಕಾರಿಯಾಗಬೇಕು. ನಗರಸಭೆ ಹಾಗೂ ಸ್ಥಳೀಯ ಸಂಸ್ಥೆಗಳ ಕಸ ವಿಲೇವಾರಿ ವಾಹನದಲ್ಲಿ ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಮೈಕ್ ಮೂಲಕ ಪ್ರಚುರಪಡಿಸಬೇಕು ಎಂದರು.

ಗ್ರಾ.ಪಂ ವತಿಯಿಂದ ಡಂಗುರ ಸಾರುವ ಕೆಲಸವಾಗಬೇಕು. ಎಲ್ಲ ಸರ್ಕಾರಿ ಕಚೇರಿಗಳು, ಶಾಲಾ ಕಾಲೇಜುಗಳಲ್ಲಿ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯ ದಿನದಂದು ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮ ಜರುಗಿಸಿ ನಂತರ ಕಾರ್ಮಿಕ ಇಲಾಖೆಗೆ ವರದಿ ಸಲ್ಲಿಸಬೇಕು. ಒಟ್ಟಾರೆಯಾಗಿ ಈ ದಿನಾಚರಣೆಯ ಅರ್ಥಪೂರ್ಣ ಆಚರಣೆಯಾಗಬೇಕು ಎಂದು ನಿರ್ದೇಶನ ನೀಡಿದರು.

ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ ,ಕಾರ್ಮಿಕ ನಿರೀಕ್ಷಕರು-1ನೇ ವೃತ್ತ, ಕಾರ್ಮಿಕ ನಿರೀಕ್ಷಕರು 2ನೇ ವೃತ್ತ, ಬಾಲ ಕಾರ್ಮಿಕ ನಿರ್ಮೂಲನಾ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕರಾದ ಸಂದೇಶ ಪಾಟೀಲ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ್ ಸೋಮನಕಟ್ಟಿ ಮಾತನಾಡಿ, ಬರುವ ಜೂನ್ 12ರಂದು ಬೆಳಿಗ್ಗೆ 11 ಗಂಟೆಗೆ ನಗರದ ಆಡಿಟೋರಿಯಂ ಹಾಲ್‌ನಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯನ್ನು ಆಚರಿಸಲಾಗುವುದು. ಈ ದಿನಾಚರಣೆಯ ಪ್ರಯುಕ್ತ ಪ್ರೌಢಶಾಲೆ, ಕಾಲೇಜು, ಎನ್.ಎಸ್.ಎಸ್, ಎನ್.ಸಿ.ಸಿ. ವಿದ್ಯಾರ್ಥಿಗಳಿಂದ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ನಿಮಿತ್ತ ಪ್ರೌಢಶಾಲಾ ಮಕ್ಕಳಿಗೆ ಪ್ರಬಂಧ, ಚಿತ್ರಕಲೆ, ಭಾಷಣ ಸ್ಪರ್ಧೆಗಳನ್ನು ಏರ್ಪಡಿಸಲಾಗುತ್ತಿದ್ದು, ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಕಾರ್ಯಕ್ರಮದ ದಿನದಂದು ಬಹುಮಾನ ವಿತರಿಸಲಾಗುವುದು ಎಂದು ಸಭೆಗೆ ವಿವರಿಸಿದರು.

## ಇಂದಿನ ನೀರು ಪೂರೈಕೆ ವಿವರ

▶▶ ಮೊದಲನೇ ಪುಟದಿಂದ

ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತರಬೇತಿಗಾಗಿ ಅರ್ಜಿ ಆಹ್ವಾನ


**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದನ್ವಯ 2024-25ನೇ ಸಾಲಿನಲ್ಲಿ ಪ್ರವಾಸೋದ್ಯಮ / ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಪರಿಶಿಷ್ಟ ಜಾತಿಗೆ ಸೇರಿದ 292 ಅಭ್ಯರ್ಥಿಗಳಿಗೆ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 162 ಅಭ್ಯರ್ಥಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಫುಡ್ ಕ್ರಾಫ್ಟ್ ಇನ್ಸ್ಟಿಟ್ಯೂಟ್ ಮೈಸೂರು ಹಾಗೂ ಇನ್ಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್‌ಮೆಂಟ್ ಮೂಲಕ ಸ್ಟೈಪಂಡ್, ವಸತಿ, ಊಟೋಪಚಾರ, ಯುನಿಫಾರಂ ಸಹಿತ ತರಬೇತಿ ಕಾರ್ಯಕ್ರಮವನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದೆ.

ಫುಡ್ ಆಂಡ್ ಬೆವರೇಜ್ ಸರ್ವಿಸ್ ಸ್ಟೀವರ್ಡ್, ರೂಂ ಅಟೆಂಡೆಂಟ್, ಫ್ರಂಟ್ ಆಫೀಸ್ ಅಸೋಸಿಯೇಟ್, ಮಲ್ಟಿ ಕ್ಯೂಸಿನ್ ಕುಕ್ ಕಾರ್ಯಕ್ರಮಗಳ ತರಬೇತಿಗಾಗಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ತರಬೇತಿ ಪಡೆಯಲು ಆಸಕ್ತ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಜೂನ್ 12ರೊಳಗೆ ಅರ್ಜಿಯನ್ನು ಪ್ರವಾಸೋದ್ಯಮ ಇಲಾಖೆ, ಗದಗ ಕಚೇರಿಯಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕಚೇರಿ 08372-233017 ಮೂಲಕ ಸಂಪರ್ಕಿಸಬಹುದಾಗಿದೆ.

### ಅರಣ್ಯ ಇಲಾಖೆಯ ಬಾಗೇವಾಡಿ ನರ್ಸರಿಯಲ್ಲಿ ಬೆಳೆದುನಿಂತ 1.50 ಲಕ್ಷ ಸಸಿಗಳು

# ಕಪ್ಪತ್ತಗುಡ್ಡದ ಹಸಿರೀಕರಣಕ್ಕೆ ಸಿದ್ಧತೆ







**■ವಿಜಯಸಾಕ್ಷಿ ಸುದ್ದಿ, ಡಂಬಳ**

ಮುಂಡರಗಿ ತಾಲೂಕಿನ ಡಂಬಳ ವ್ಯಾಪ್ತಿಯ ಉತ್ತರ ಕರ್ನಾಟಕದ ಸಹ್ಯಾದ್ರಿ ಎಂದೇ ಪ್ರಸಿದ್ಧವಾದ ಶುದ್ಧ ಗಾಳಿಗೆ ಹೆಸರಾದ ತಾಣ ಕಪ್ಪತ್ತಗುಡವನ್ನು ಇನ್ನಷ್ಟು ಹಸಿರುಗೊಳಿಸುವದರೊಂದಿಗೆ ರೈತರ ಜಮೀನುಗಳಲ್ಲಿ ಬೆಳೆಸಲು ಬೇಕಾಗುವ 1.50 ಲಕ್ಷಕ್ಕೂ ಅಧಿಕ ಸಸಿಗಳನ್ನು ಬಾಗೇವಾಡಿ ನರ್ಸರಿಯಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು ಸಿಬ್ಬಂದಿಗಳು ಬೆಳೆಸಿ ಕಪ್ಪತ್ತಗುಡ್ಡದ ಹಸಿರು ಹೆಚ್ಚಿಸಲು ಸಿದ್ಧರಾಗಿದ್ದಾರೆ.

ಇದೀಗ ಬೆಳೆಸಿರುವ 1.50 ಲಕ್ಷ ಸಸಿಗಳಲ್ಲಿ 1 ಲಕ್ಷ 20 ಸಾವಿರ ಅಧಿಕ ಸಸಿಗಳನ್ನು ಕಪ್ಪತ್ತಗುಡ್ಡ ಭಾಗದಲ್ಲಿಯೇ ನೆಡುವುದು ಹಾಗೂ ಇನ್ನುಳಿದ 30 ಸಾವಿರ ಸಸಿಗಳನ್ನು ರೈತರಿಗೆ ವಿತರಿಸುವ ಮೂಲಕ ರೈತರ ಜಮೀನುಗಳಲ್ಲಿಯೂ ಹಸಿರೀಕರಣ ಮಾಡುವುದು ಅರಣ್ಯ ಇಲಾಖೆಯ ಉದ್ದೇಶವಾಗಿದೆ. ಇದಕ್ಕೆ ಕಪ್ಪತ್ತಗುಡ್ಡ ವಲಯ ಅರಣ್ಯ ಅಧಿಕಾರಿ ಮಂಜುನಾಥ ಮೇಗಲಮನಿ ಮತ್ತು ಹಲವಾರು ಅಧಿಕಾರಿಗಳು, ಸಿಬ್ಬಂದಿಗಳ ನಿರಂತರ ಶ್ರಮವಿದೆ.

ಅರಣ್ಯ ಇಲಾಖೆಯಿಂದ ಸಿದ್ಧವಾಗಿರುವ ಈ ಸಸಿಗಳನ್ನು ಬೆಳೆಸುವಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳ ಹಲವಾರು ತಿಂಗಳುಗಳ ಶ್ರಮವಿದೆ. ಗೊಬ್ಬರ, ಮರಳು ಮತ್ತು ಕೆಂಪು ಮಣ್ಣನ್ನು ಎಚ್ಚರಿಕೆಯಿಂದ ಸಂಯೋಜನೆ ಮಾಡಿ ಫಲವತ್ತಾದ ಮಣ್ಣನ್ನು ತಯಾರಿಸಿ, ನಂತರ ಬೀಜಗಳನ್ನು ಸಾಮಾನ್ಯವಾಗಿ ಜನವರಿ ಮತ್ತು ಮಾರ್ಚ್ ನಡುವೆ ಚೀಲಗಳಲ್ಲಿ ಹಾಕಿ, ಅವುಗಳು ಮೊಳಕೆಯೊಡೆದು ಬೆಳೆದ ನಂತರ ಜೂನ್ ತಿಂಗಳಲ್ಲಿ ಅವುಗಳನ್ನು ದೊಡ್ಡ ಚೀಲಗಳಿಗೆ ಸ್ಥಳಾಂತರಿಸಲಾಗುತ್ತದೆ. ಹೀಗೆ ನಿರಂತರವಾಗಿ ಒಂದು ವರ್ಷದ ಶ್ರಮದ ಪ್ರತಿಫಲವಾಗಿ ಸಸಿಗಳು ನಾಟಿ ಮಾಡಲು ಸಿದ್ಧವಾಗುತ್ತವೆ.

ಆರ್‌ಎಸ್‌ಪಿ ಅಡಿ ರೈತರ ವಿತರಣೆಗಾಗಿ ಸಿದ್ಧವಾಗಿರುವ 30 ಸಾವಿರ ಸಸಿಗಳಲ್ಲಿ ಅತ್ಯಂತ ಬೆಲೆಬಾಳುವ, ರೈತರಿಗೆ ಮುಂದೆ ವರದಾನವಾಗುವ ಸಾಗವಾನಿ, ಮಹಾಗನಿ, ಸೀತಾಫಲ, ನುಗ್ಗೆ, ಲಿಂಬೆ, ಬಿದಿರು, ನೇರಳೆ, ನೆಲ್ಲಿ, ಮಾವಿನ ಸಸಿಗಳಿದ್ದು, ರೈತರಿಗೆ ಅತ್ಯಂತ ಕಡಿಮೆ ಬೆಲೆಗೆ ಸಿಗಲಿವೆ.

ವರ್ಷದಿಂದ ವರ್ಷಕ್ಕೆ ಭೂಮಿಯ ತಾಪಮಾನ ಹೆಚ್ಚಾಗುತ್ತಿದೆ. ಮಳೆ ಕಡಿಮೆಯಾಗುತ್ತಿದೆ. ಇದರ ತಡೆಗೆ ಪ್ರತಿಯೊಬ್ಬರೂ ಗಿಡಗಳನ್ನು ಹೇರಳವಾಗಿ ಬೆಳೆಸಬೇಕು. ಇದರಿಂದ ಸಹಜವಾಗಿಯೇ ಆಮ್ಲಜನಕದ ಪ್ರಮಾಣವೂ ಹೆಚ್ಚಾಗುತ್ತದೆ. ವಾಯುಮಾಲಿನ್ಯ ಕಡಿಮೆಯಾಗಿ, ಮಳೆ ಪ್ರಮಾಣ ಹೆಚ್ಚಾಗಿ, ಬರಗಾಲದಂತಹ ಸ್ಥಿತಿ ದೂರವಾಗುತ್ತದೆ. ಈ ಬಗ್ಗೆ ಪ್ರತಿಯೊಬ್ಬರೂ ಗಮನ ಹರಿಸಬೇಕು. ಸಸಿಗಳನ್ನು ಪಡೆದುಕೊಳ್ಳಲು ಇಚ್ಛಿಸುವವರು ಅರಣ್ಯ ಇಲಾಖೆಯ ಶಂಕರ ಕೋನಪ್ಪನವರ-9886583017, ಕೃಷ್ಣಾ ಘಮ್ಮರ-7483136732 ಇವರನ್ನು ಸಂಪರ್ಕಿಸಬಹುದಾಗಿದೆ.

ನಮ್ಮ ಬಾಗೇವಾಡಿ ನರ್ಸರಿಯಲ್ಲಿ ಹಿರಿಯ ಅರಣ್ಯ ಅಧಿಕಾರಿಗಳ ಸೂಚನೆಯ ಮೇರೆಗೆ 1.50 ಲಕ್ಷ ಸಸಿಗಳನ್ನು ಬೆಳೆಸಿದ್ದು, ಕಪ್ಪತ್ತಗುಡ್ಡದಲ್ಲಿ ನೆಡಲಾಗುವುದ. ರೈತರು ತಮ್ಮ ಜಮೀನುಗಳಲ್ಲಿ, ತೋಟಗಳ ಬದುವಿನಲ್ಲಿಯೂ ಗಿಡಗಳನ್ನು ಬೆಳೆಸಲು ಮುಂದಾಗಬೇಕು.

**- ಮಂಜುನಾಥ ಮೇಗಲಮನಿ.**
ಕಪ್ಪತ್ತಗುಡ್ಡ ವಲಯ ಅರಣ್ಯಾಧಿಕಾರಿ.

ವನೌಷಧಿಗಳ ಆಗರ, ಸಸ್ಯ ಕಾಶಿ ಕಪ್ಪತ್ತಗುಡ್ಡ ಈ ಭಾಗದ ಹಸಿರಿನಿಂದ ಕೂಡಿದ, ಸ್ವಚ್ಛ ಆಮ್ಲಜನಕ ನೀಡುವ ತಾಣವಾಗಿದೆ. ಕಪ್ಪತ್ತಗುಡ್ಡಕ್ಕೆ ಅರಣ್ಯ ಇಲಾಖೆಯಿಂದ 1.50 ಲಕ್ಷ ಸಸಿಗಳನ್ನು ಬೆಳೆಸಿ ಕಪ್ಪತ್ತಗುಡ್ಡದಲ್ಲಿ ನೆಡಲಾಗುತ್ತಿದೆಯಲ್ಲದೆ, ರೈತರಿಗೂ ವಿತರಿಸಲಾಗುತ್ತಿದೆ. ಇದರ ಸದುಪಯೋಗ ಪಡೆದುಕೊಂಡು, ಅರಣ್ಯ ಇಲಾಖೆಯೊಂದಿಗೆ ಪ್ರತಿಯೊಬ್ಬರೂ ಕೈಜೋಡಿಸಿ ಪರಿಸರ ಉಳಿಸಿ ಬೆಳೆಸಲು ಮುಂದಾಗಿ.

**- ಜಿ.ಎಸ್. ಪಾಟೀಲ.**
ರೋಣ ಮತಕ್ಷೇತ್ರದ ಶಾಸಕರು.


ಕರ್ನಾಟಕ ಸರಕಾರ

**ಪೌರಾಡಳಿತ ಇಲಾಖೆ**

**ಪಟ್ಟಣ ಪಂಚಾಯತ ಕಾರ್ಯಾಲಯ, ಮುಳಗುಂದ-582117**

**(ಜಿಲ್ಲೆ: ಗದಗ, ರಾಜ್ಯ: ಕರ್ನಾಟಕ)**

**ಸಂ:ಪಪಂಮು/ತಾಂ.ವಿ./ಸಾಮಾನ್ಯ ನಿಧಿ/ವಾರ್ಷಿಕ ಟೆಂಡರ್ & ಡ್ರೈವರ/ವಹಿ-/2025-26**
**ದಿನಾಂಕ:-02-06-2025**

**ಅಲ್ಪಾವಧಿ ಮರು ಟೆಂಡರ್ ಪ್ರಕಟಣೆ**
**ಕರ್ನಾಟಕ ಪಬ್ಲಿಕ್ ಪ್ರೊಕ್ಯೂರಮೆಂಟ್ ಮೂಲಕ**

ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ ಮುಳಗುಂದ ಇವರಿಂದ ಮುಳಗುಂದ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಕರ್ನಾಟಕ ಪಾರದರ್ಶಕತೆ ಅಧಿನಿಯಮ-2000ರ ಪ್ರಕಾರ "ಕರ್ನಾಟಕ ಪಬ್ಲಿಕ್ ಪ್ರೊಕ್ಯೂರಮೆಂಟ್ ಪೋರ್ಟಲ್" ಪದ್ಧತಿಯಲ್ಲಿ ಸನ್ 2025-26ನೇ ಸಾಲಿನ ಪಟ್ಟಣ ಪಂಚಾಯತ ಸಾಮಾನ್ಯ ನಿಧಿ ಅನುದಾನದಡಿ ಇಂಡೆಂಟ್ ನಂಬರ್‌ಗಳ ಸಂಖ್ಯೆಗಳು-DMA/2024-25/SE4530/Call-3 ತ್ಯಾಜ್ಯ ಸಾಗಾಟದ ವಾಹನಗಳಿಗೆ ಚಾಲಕರು, ತ್ಯಾಜ್ಯ ವಿಲೇವಾರಿ ಘಟಕದಲ್ಲಿ ಮಷಿನ್ ಆಪ್‌ರೇಟರ್, ಹಾಗೂ ವಾಚಮನ್‌ಗಳನ್ನು ಹೊರಗುತ್ತಿಗೆ ಮೂಲಕ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರಮೆಂಟ್ ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಚಾಲ್ತಿ ಸಾಲಿನ ಅರ್ಹ ಗುತ್ತಿಗೆದಾರರಿಂದ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಇ-ಪ್ರೊಕ್ಯೂರಮೆಂಟ್ ದಾಖಲೆಗಳಿಗಾಗಿ **http://kppp.karnataka.gov.in** ರ ಮೂಲಕ ಕೆಳಗೆ ನಮೂದಿಸಿರುವ ದಿನಾಂಕದಂದು ಆನ್‌ಲೈನ್ ಮೂಲಕವೇ ಟೆಂಡರ್ ಸಲ್ಲಿಸುವದು.

(1) ಇ-ಪ್ರೊಕ್ಯೂರಮೆಂಟ್ ಪದ್ಧತಿಯಲ್ಲಿ ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ : **06-06-2025 ಸಂಜೆ:4.00** ಗಂಟೆಗೆ. (2) ಇ-ಪ್ರೊಕ್ಯೂರಮೆಂಟ್ ಪದ್ಧತಿಯಲ್ಲಿ ತಾಂತ್ರಿಕ ಬಿಡ್ ತೆರೆಯುವ ದಿನಾಂಕ : **09-06-2025 ಸಂಜೆ 4.00** ಗಂಟೆಗೆ. (3) ಇ-ಪ್ರೊಕ್ಯೂರಮೆಂಟ್ ಪದ್ಧತಿಯಲ್ಲಿ ಆರ್ಥಿಕ ಬಿಡ್ ತೆರೆಯುವ ದಿನಾಂಕ : **10-06-2025 ಸಂಜೆ:4:30** ಗಂಟೆಗೆ

ನಿಗಧಿ ಪಡಿಸಿದ ದಿನಾಂಕಗಳು ಒಂದು ವೇಳೆ ರಜಾ ದಿನಗಳನ್ನಾಗಿ ಘೋಷಿಸಲ್ಪಟ್ಟರೆ ಮುಂದಿನ ದಿನಾಂಕವನ್ನು ಪರಿಗಣಿಸಲಾಗುವದು. ಯಾವುದೇ ತಿದ್ದುಪಡಿಗಳನ್ನು ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ.

ಈ ಕಚೇರಿಯಲ್ಲಿ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲಾ ಕಾಮಗಾರಿ ಇ.ಎಂ.ಡಿ. ಪೂರ್ಣಗೊಳಿಸುವ ಅವಧಿ, ಗುತ್ತಿಗೆದಾರರ ದರ್ಜೆ ಹಾಗೂ ಇನ್ನಿತರ ಹೆಚ್ಚಿನ ಮಾಹಿತಿ ಹಾಗೂ ಷರತ್ತುಗಳಿಗೆ ಕಚೇರಿಯ ವೆಬ್‌ಸೈಟ್ **http://www.mulagundatown.mrc.gov.in** ಹಾಗೂ ಕಚೇರಿ ವೇಳೆಯಲ್ಲಿ ಸಂಭಂದಿಸಿದ ಶಾಖೆಯಲ್ಲಿ ಮಾಹಿತಿಯನ್ನು ಪಡೆಯಬಹುದು. ಇ-ಪೋರ್ಟಲ್‌ನ ಎಲ್ಲ ಷರತ್ತುಗಳು ಅನ್ವಯಿಸುತ್ತವೆ ಹಾಗೂ ಟೆಂಡರ್ ಮಂಜೂರ ವ ನಾಮಂಜೂರ ಮಾಡುವ ಅಧಿಕಾರವನ್ನು ಪಟ್ಟಣ ಪಂಚಾಯತ ಕಾಯ್ದಿರಿಸಿಕೊಂಡಿದೆ.

**ಸಹಿ/-(ಶ್ರೀ.ಮಂಜುನಾಥ ಪಿ ಗುಳೇದ)** **ಸಹಿ/- ( ಶ್ರೀಮತಿ.ಯಲ್ಲವ್ವ ಕೋಂ.ಬ ಕವಲೂರ)**
**ಮುಖ್ಯಾಧಿಕಾರಿ** **ಅಧ್ಯಕ್ಷರು**
**ಪಟ್ಟಣ ಪಂಚಾಯತ ಮುಳಗುಂದ** **ಪಟ್ಟಣ ಪಂಚಾಯತ ಮುಳಗುಂದ**

**ವಾ.ಸಾ.ಇ/ಗದಗ/86/ದೇಶಪಾಂಡೆಪಬ್ಲಿಸಿಟಿ/2025-26**

ಗದಗ ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವ ಎಚ್ ಕೆ ಪಾಟೀಲ

# ಯೋಜನೆಗಳು ಕಟ್ಟ ಕಡೆಯ ವ್ಯಕ್ತಿಗೂ ತಲುಪಬೇಕು



■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾತಂತ್ರ್ಯಾನಂತರ ದೇಶದಲ್ಲಿ ಅತ್ಯಂತ ಯಶಸ್ಸು ಕಂಡ ಸರ್ಕಾರದಿಂದ ಅನುಷ್ಠಾನಿತ ಪಂಚ ಗ್ಯಾರಂಟಿ ಯೋಜನೆಗಳು ಅರ್ಹವಿರುವ, ಕಟ್ಟ ಕಡೆಯ ಫಲಾನುಭವಿಗಳಿಗೂ ಒದಗಬೇಕು ಎಂದು ರಾಜ್ಯದ ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ನಗರದ ಎಸಿ ಆವರಣದಲ್ಲಿರುವ ತಾಲೂಕು ಗ್ಯಾರಂಟಿ ಯೋಜನೆಗಳ ಕಾರ್ಯಾಲಯದಲ್ಲಿ ಸೋಮವಾರ ಜರುಗಿದ ಗದಗ ತಾಲೂಕು ಮಟ್ಟದ ಗ್ಯಾರಂಟಿ ಸಮಿತಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

> ಅನ್ನಭಾಗ್ಯ ಯೋಜನೆಯ ಸಮರ್ಪಕ ಅನುಷ್ಠಾನಕ್ಕಾಗಿ ಆಹಾರ ಇಲಾಖೆಯ ಅಧಿಕಾರಿಗಳು ಪಡಿತರ ಅಂಗಡಿದಾರರ ಜೊತೆಗೆ ಸಭೆ ನಡೆಸಬೇಕು. ಅನ್ನಭಾಗ್ಯದ ಅಕ್ಕಿಯು ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಶಕ್ತಿ ಯೋಜನೆಯಿಂದ ಮಹಿಳೆಯರಿಗೆ ಜೀವನದಲ್ಲಿ ನಿಜವಾದ ಶಕ್ತಿ ಬಂದತಾಗಿದ್ದು, ಮಹಿಳೆಯರು ಸ್ವಾವಲಂಬನೆಯ ಬದುಕು ನಡೆಸಲು ಸಹಕಾರಿಯಾಗಿದೆ ಎಂದು ಸಚಿವ ಎಚ್. ಕೆ. ಪಾಟೀಲ ಹೇಳಿದರು.

ಗದಗ ತಾಲೂಕು ಮಟ್ಟದ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮಾತನಾಡಿ, ಯೋಜನೆಯ ಪ್ರಗತಿಯ ಕುರಿತು ನಿಖರ ಮಾಹಿತಿ ಒದಗಿಸಬೇಕು. ಗೃಹಲಕ್ಷ್ಮೀ ಹಾಗೂ ಯುವನಿಧಿ ಯೋಜನೆಯ ಕುರಿತು ಇನ್ನೂ ಹೆಚ್ಚಿನ ಅರಿವು ಮೂಡಿಸಬೇಕು. ಗದಗ ತಾಲೂಕಿನಲ್ಲಿ ಗೃಹಲಕ್ಷ್ಮೀ ಹಣ ಪಡೆಯುತ್ತಿದ್ದ ಕೆಲವು ಮಹಿಳೆಯರು ಮರಣ ಹೊಂದಿದ ಹಿನ್ನೆಲೆಯಲ್ಲಿ ಅವರ ಹೆಸರನ್ನು ಫಲಾನುಭವಿಯ ಪಟ್ಟಿಯಿಂದ ಕೈಬಿಡಬೇಕು ಎಂದರು.

ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ ಮಾತನಾಡಿ, ತಮ್ಮ ಗಮನಕ್ಕೆ ಬಂದ ಸಮಸ್ಯೆಯೊಂದರಲ್ಲಿ, ಒಂದು ಮನೆಯ ಯಜಮಾನ ಗೃಹಜ್ಯೋತಿ ಫಲಾನುಭವಿಯಾಗಿದ್ದು, ಎಷ್ಟು ಕಡಿಮೆ ವಿದ್ಯುತ್ ಉಪಯೋಗಿಸಿದರೂ ವಿದ್ಯುತ್ ಬಿಲ್ ಬರುತ್ತಿದೆ ಎಂದು ಸಮಸ್ಯೆಯನ್ನು ಸಭೆಗೆ ತಿಳಿಸಿದರು.

ಇದಕ್ಕೆ ಉತ್ತರಿಸಿದ ಹೆಸ್ಕಾಂ ಅಧಿಕಾರಿಗಳು, ಗೃಹಜ್ಯೋತಿ ಫಲಾನುಭವಿಗಳಿಗೆ 2022-23ರ ಸಾಲಿನಲ್ಲಿ ಉಪಯೋಗಿಸಿದ ವಿದ್ಯುತ್‌ನ್ನು ಮಾಪನವಾಗಿ ತೆಗೆದುಕೊಳ್ಳುತ್ತೇವೆ. ಸರ್ಕಾರದ ಆದೇಶದ ಅನುಸಾರ ಹಿಂದಿನ ವರ್ಷದ ವಿದ್ಯುತ್ ಬಳಕೆಯನ್ನು ಮಾಪನವಾಗಿ ತೆಗೆದುಕೊಂಡಿದರಿಂದ ಹೀಗಾಗಿದೆ ಎಂದು ಮಾಹಿತಿ ನೀಡಿದರು. ಸಭೆಯಲ್ಲಿ ತಾಲೂಕು ಗ್ಯಾರಂಟಿ ಸಮಿತಿಯ ಸದಸ್ಯರಾದ ಶಂಭು ಕಾಳೆ, ಮೀನಾಕ್ಷಿ ಬೆನಕಣ್ಣವರ, ಸಂಗು ಕರಕಲಮಟ್ಟಿ, ನಿಂಗಪ್ಪ ದೇಸಾಯಿ, ಸಂಗಮೇಶ ಹಾದಿಮನಿ, ರಮೇಶ ಹೊನ್ನಿನಾಯ್ಕರ್, ದೇವರೆಡ್ಡಿ ತಿರ್ಲಾಪುರ, ಮಲ್ಲಪ್ಪ ದಂಡಿನ, ಗಣೇಶಸಿಂಗ್ ಮಿಟಾಡ, ಮಲ್ಲಪ್ಪ ಬಾರಕೇರ, ಭಾಷಾ ಮಲ್ಲಸಮುದ್ರ, ಸಾವಿತ್ರಿ ಹೂಗಾರ, ಶರೀಫ್, ತಾಲೂಕು ಪಂಚಾಯತ್ ಮ್ಯಾನೇಜರ್ ರುದ್ರಪ್ಪ ಬಾವಿ, ಪಂಚ ಗ್ಯಾರಂಟಿ ಯೋಜನೆಗಳ ಅಧಿಕಾರಿಗಳು ಹಾಜರಿದ್ದರು.

# ಮಂತ್ರಾಲಯದ ಪೂಜ್ಯರಿಗೆ ಗುರುವಂದನೆ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕಳಸಾಪೂರ ಗ್ರಾಮದ ಶ್ರೀ ರಾಘವೇಂದ್ರ ಸ್ವಾಮಿಗಳ ಮೃತ್ತಿಕಾ ಬೃಂದಾವನ ಪ್ರತಿಷ್ಠಾಪನೆ ಹಾಗೂ ಗುರುವಂದನೆ ಕಾರ್ಯಕ್ರಮಕ್ಕೆ ಆಗಮಿಸಿದ್ದ ಮಂತ್ರಾಲಯದ ಶ್ರೀಕ್ಷೇತ್ರದ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರಿಗೆ ಗದಗ ಜಿಲ್ಲಾ ವೀರಶೈವ ಮಹಾಸಭಾದಿಂದ ಗುರುವಂದನೆ ಸಲ್ಲಿಸಲಾಯಿತು.



ಇದೇ ಸಂದರ್ಭದಲ್ಲಿ ಗದಗ ಜಿಲ್ಲಾ ವೀರಶೈವ ಮಹಾಸಭಾದ ಅಧ್ಯಕ್ಷ ಶರಣಬಸಪ್ಪ ಗುಡಿಮನಿ ಅವರನ್ನು ಪೂಜ್ಯರು ಸನ್ಮಾನಿಸಿ ಆಶೀರ್ವದಿಸಿದರು. ಸದಾಶಿವಯ್ಯ ಮದರಿಮಠ, ಪ್ರಕಾಶ ಉಗಲಾಟ, ವಿರುಪಾಕ್ಷಗೌಡ ದೇಸಾಯಿಗೌಡ್ರ, ಈರಣ್ಣ ಬಾಳಿಕಾಯಿ, ಸಂತೋಷ ಕಬಾಡರ, ರಾಘಣ್ಣ ಕಾಲವಾಡ, ಗುರು ತಡಸದ, ಹಿರೇಮಠ ಮುಂತಾದವರಿದ್ದರು.


॥ ಶ್ರೀ ಗ್ರಾಮದೇವತಾ ಪ್ರಸನ್ನ ॥



ಗದಗ ತಾಲೂಕ ಮುಳಗುಂದ ಪಟ್ಟಣದಲ್ಲಿ

ಶ್ರೀ ಗ್ರಾಮದೇವತಾ ಚೋಪ ಜಾತ್ರಾ ಮಹೋತ್ಸವದ ಆಮಂತ್ರಣ

ದಿನಾಂಕ 03-06-2025 ನೇ ಮಂಗಳವಾರದಿಂದ 06-06-2025 ನೇ ಶುಕ್ರವಾರದವರೆಗೆ

ದಿನಾಂಕ 03-06-2025 ನೇ ಮಂಗಳವಾರ
ಮುಂಜಾನೆ ಶ್ರೀ ಗ್ರಾಮದೇವತೆಯ ಪುರಪ್ರವೇಶ ಕೌಲಪೇಟೆಯ ಶ್ರೀ ದುರ್ಗಾದೇವಿಯ ಮಂದಿರಕ್ಕೆ ಹೋಗುವುದು. ನಂತರ ಕಟ್ಟಿ ಮನೆಗಳಿಗೆ ದಯಮಾಡಿಸಿ ಭಕ್ತರಿಂದ ದೇವಿಗೆ ಉಡಿ ತುಂಬುವುದು. ಸಾಯಂಕಾಲ ಚೌತಮನೆಗೆ ಬಂದು ವಿರಾಜಮಾನಳಾಗುವಳು.
ಸಾಯಂಕಾಲ 6-00 ಘಂಟೆಗೆ
ಜಾತ್ರಾ ಮಹೋತ್ಸವದ ಉದ್ಘಾಟನಾ ಕಾರ್ಯಕ್ರಮ

ದಿನಾಂಕ 04-06-2025 ನೇ ಬುಧವಾರ
ಶ್ರೀ ಗ್ರಾಮದೇವತೆಯ ರಥವು ಚೌತಮನೆಯಿಂದ ದೇವಿಕಟ್ಟೆಗಳಿಗೆ ಹೊರಟು ಭಕ್ತರಿಂದ ದೇವಿಗೆ ಉಡಿ ತುಂಬುವುದು ಪುನಃ ಚೌತಮನೆಗೆ ಬಂದು ವಿರಾಜಮಾನಳಾಗುವಳು.
ಸಾಯಂಕಾಲ 6-00 ಘಂಟೆಗೆ ಧರ್ಮಸಭೆ-1

ದಿನಾಂಕ 06-06-2025 ನೇ ಶುಕ್ರವಾರ
ಶ್ರೀ ಗ್ರಾಮದೇವತೆಯ ದೇವಸ್ಥಾನದ ಶಕ್ತಿಪೀಠದ ಶ್ರೀದೇವಿಯನ್ನು ಪ್ರತಿಷ್ಠಾಪಿಸುವುದು. ನಂತರ ಹೋಮ ಹವನಗಳು ಜರುಗುವವು.
ನಂತರ ಶ್ರೀ ಗ್ರಾಮದೇವತೆಗೆ ಉಡಿ ತುಂಬುವ ಕಾರ್ಯಕ್ರಮ ಜರುಗುವುದು.

ದಿನಾಂಕ 05-06-2025 ನೇ ಗುರುವಾರ
ಶ್ರೀ ಗ್ರಾಮದೇವತೆಯ ರಥವು ಚೌತಮನೆಯಿಂದ ದೇವಿಕಟ್ಟೆಗಳಿಗೆ ಹೊರಟು ಭಕ್ತರಿಂದ ದೇವಿಗೆ ಉಡಿ ತುಂಬುವುದು ಪುನಃ ಚೌತಮನೆಗೆ ಬಂದು ವಿರಾಜಮಾನಳಾಗುವಳು.
ಸಾಯಂಕಾಲ 6-00 ಘಂಟೆಗೆ ಧರ್ಮಸಭೆ-2
ನಂತರ ರಾತ್ರಿ 10-30 ಘಂಟೆಗೆ
ನಾಡಿನ ಪ್ರಖ್ಯಾತ ಕಲಾತಂಡಗಳು ಹಾಗೂ ವಿವಿಧ ವಾದ್ಯ ವೈಭವಗಳೊಂದಿಗೆ ತಮಾಶೆ ಮದ್ದುಗಳು, ಬಿರುಸು ಬಾಣಗಳಿಂದ ಶ್ರೀದೇವಿಯ ಭವ್ಯವಾದ ಮೆರವಣಿಗೆಯು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ದೇವಸ್ಥಾನವನ್ನು ತಲುಪುವುದು.

ಮೇಲಿನ ಎಲ್ಲ ಕಾರ್ಯಕ್ರಮಗಳಲ್ಲಿ ನಾಡಿನ ಮಠಾಧೀಶರು, ರಾಜಕೀಯ ಧುರೀಣರು ಹಾಗೂ ಗುರು-ಹಿರಿಯರು
ಜಾತ್ರೆಗೆ ಆಗಮಿಸುವ ಸಮಸ್ತ ಭಕ್ತಾದಿಗಳಿಗೆ
ಆದರದ ಸುಸ್ವಾಗತ

-: ಸ್ವಾಗತ ಕೋರುವವರು :-
ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು, ಗ್ರಾಮದೇವತಾ ಜಾತ್ರಾ ಕಮೀಟಿ, ಮುಳಗುಂದ





ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಡಿ. ಕೆ. ಶಿವಕುಮಾರ್
ಮಾನ್ಯ ಉಪಮುಖ್ಯಮಂತ್ರಿಗಳು

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಗದಗ
ಪ್ರವಾಸೋದ್ಯಮ ಇಲಾಖೆ, ಬೆಂಗಳೂರು
ಪುರಾತತ್ವ , ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು
ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಗದಗ
ಇವರುಗಳ ಸಹಯೋಗದಲ್ಲಿ

ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯ ಶ್ರೀ ಕೋಟೆ ವೀರಭದ್ರೇಶ್ವರ ದೇವಸ್ಥಾನ ಅವರಣದಲ್ಲಿ
ಉತ್ಖನನಕ್ಕೆ ಚಾಲನೆ

ದಿನಾಂಕ: 03ನೇ ಜೂನ್, 2025 ಮಂಗಳವಾರ, ಸಮಯ: ಬೆಳಿಗ್ಗೆ 10:00 ಗಂಟೆಗೆ
ಸ್ಥಳ: ಶ್ರೀ ಕೋಟೆ ವೀರಭದ್ರೇಶ್ವರ ದೇವಸ್ಥಾನ ಅವರಣ, ಲಕ್ಕುಂಡಿ

ಉತ್ಖನನಕ್ಕೆ ಚಾಲನೆ
ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು

ಘನ ಉಪಸ್ಥಿತಿ
ಶ್ರೀ ಬಸವರಾಜ ಹೊರಟ್ಟಿ
ಮಾನ್ಯ ಸಭಾಪತಿಗಳು, ಕರ್ನಾಟಕ ವಿಧಾನ ಪರಿಷತ್ತು

ಪ್ರಾಚ್ಯಾವಶೇಷಗಳ ಡಿಜಿಟಲ್ ದಾಖಲೀಕರಣ ಕಾರ್ಯಕ್ಕೆ ಚಾಲನೆ
ಡಾ. ಎಚ್. ಕೆ. ಪಾಟೀಲ್
ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರು

ಅಧ್ಯಕ್ಷತೆ
ಶ್ರೀ ಸಿ. ಸಿ. ಪಾಟೀಲ
ಮಾನ್ಯ ಶಾಸಕರು, ನರಗುಂದ



ನಗರಾಭಿವೃದ್ಧಿ ಇಲಾಖೆ
ಪೌರಾಡಳಿತ ನಿರ್ದೇಶನಾಲಯ ಜಿಲ್ಲಾಡಳಿತ, ಗದಗ ಗದಗ-ಬೆಟಗೇರಿ ನಗರಸಭೆ
ಇವರುಗಳ ಸಹಯೋಗದಲ್ಲಿ

ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರದ ಉದ್ಘಾಟನೆ ಹಾಗೂ ಪ್ರಾಧಿಕಾರದ ಅಭಿವೃದ್ಧಿಯ ಪರಿಕಲ್ಪನೆಯ ಅನಾವರಣ ಕಾರ್ಯಕ್ರಮ

ದಿನಾಂಕ: 03ನೇ ಜೂನ್, 2025 ಮಂಗಳವಾರ, ಸಮಯ: ಸಂಜೆ 4:30 ಗಂಟೆಗೆ
ಸ್ಥಳ: ಪಂಡಿತ ಡಾ. ಭೀಮಸೇನ ಜೋಶಿ ರಂಗ ಮಂದಿರ, ಹುಬ್ಬಳ್ಳಿ ರಸ್ತೆ, ಗದಗ

ಉದ್ಘಾಟನೆ
ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು

ಘನ ಉಪಸ್ಥಿತಿ
ಶ್ರೀ ಬಸವರಾಜ ಹೊರಟ್ಟಿ — ಮಾನ್ಯ ಸಭಾಪತಿಗಳು, ಕರ್ನಾಟಕ ವಿಧಾನ ಪರಿಷತ್ತು
ಶ್ರೀ ಸುರೇಶ ಬಿ. ಎಸ್. (ಬೈರತಿ) — ಮಾನ್ಯ ನಗರಾಭಿವೃದ್ಧಿ ಸಚಿವರು
ಶ್ರೀ ರಹೀಮ್ ಖಾನ್ — ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು

ಅಧ್ಯಕ್ಷತೆ
ಡಾ. ಎಚ್. ಕೆ. ಪಾಟೀಲ್
ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಅಧ್ಯಕ್ಷರು, ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ, ಗದಗ



ಡಾ. ಎಚ್. ಕೆ. ಪಾಟೀಲ್, ಮಾನ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ನಮ್ಮ ಸ್ಮಾರಕ ಯೋಜನೆಯಡಿಯಲ್ಲಿ ಸಂವಾದ ಮತ್ತು ಡಿಜಿಟಲ್ ವೇದಿಕೆ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು

ಮಾನ್ಯ ಲೋಕಸಭೆ ಮತ್ತು ರಾಜ್ಯಸಭೆ ಸಂಸದರು, ವಿಧಾನಸಭೆ ಮತ್ತು ವಿಧಾನ ಪರಿಷತ್ತಿನ ಮಾನ್ಯ ಶಾಸಕರುಗಳು, ವಿವಿಧ ನಿಗಮ ಮಂಡಳಿಗಳ ಅಧ್ಯಕ್ಷರುಗಳು ಹಾಗೂ ಸ್ಥಳೀಯ ಜನ ಪ್ರತಿನಿಧಿಗಳು ಸಮಾರಂಭದಲ್ಲಿ ವಿಶೇಷ ಅತಿಥಿಗಳಾಗಿ ಭಾಗವಹಿಸುವರು.

ಶಕ್ತಿ ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ | ಗೃಹಜ್ಯೋತಿ ಪ್ರತಿ ಮನೆಗೆ 200 | ಅನ್ನಭಾಗ್ಯ 10kg | ಗೃಹಲಕ್ಷ್ಮಿ ₹2000 | ಯುವನಿಧಿ ₹3000 ₹1500

ಸರ್ವರಿಗೂ ಆದರದ ಸ್ವಾಗತ

ಕರ್ನಾಟಕ ವಾರ್ತೆ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka